ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
EMAIL : dairyadadaari@gmail.com ಸಂಪುಟ: 01 ಸಂಚಿಕೆ: 170
ಬೆಲೆ ರೂ : 2.00
ರಾಯಚೂರು
ಪುಟ: 4
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶನಿವಾರ: 13-06-2026

## ವೆನ್ನಿಲಾ ಕೊಲೆ ಪ್ರಕರಣ: ಕರ್ತವ್ಯಲೋಪಕ್ಕೆ ಮೂವರು ಪೊಲೀಸರ ಅಮಾನತು

**ಬೆಂಗಳೂರು,ಜೂ.12–**ಕಾಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮಗು ವೆನ್ನಿಲಾ ಕೊಲೆ ಪ್ರಕರಣದಲ್ಲಿ ಕರ್ತವ್ಯ ಲೋಪ ಎಸಗಿದ ಇನ್ಸ್‌ಪೆಕ್ಟರ್ ಸೇರಿ ಮೂವರು ಪೊಲೀಸರನ್ನು ಅಮಾನತು ಮಾಡಲಾಗಿದೆ.

ಐದೂವರೆ ವರ್ಷದ ಮಗು ಕೊಲೆ ಪ್ರಕರಣ ದಾಖಲಿಸಲು ವಿಳಂಬ ಧೋರಣೆ ಹಾಗೂ ಕರ್ತವ್ಯಲೋಪ ಕಂಡು ಬಂದ ಹಿನ್ನೆಲೆಯಲ್ಲಿ ಹಿಂದಿನ ಕಾಡುಗೋಡಿ ಇನ್ಸ್‌ಪೆಕ್ಟರ್, ಹಾಲಿ ಸಬ್ ಇನ್ಸ್‌ಪೆಕ್ಟರ್ ಸೇರಿ ಮೂವರನ್ನು ಅಮಾನತು ಮಾಡಲಾಗಿದೆ.

ಪ್ರಸ್ತುತ ಎಲೆಕ್ಟ್ರಾನಿಕ್ ಸಿಟಿ ಸಂಚಾರ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ಆಗಿರುವ ಹಾಗೂ ಒಂದು ತಿಂಗಳ ಹಿಂದೆ ಕಾಡುಗೋಡಿ ಠಾಣೆಯ ಇನ್ಸ್‌ಪೆಕ್ಟರ್ ಆಗಿದ್ದ ರಂಗಸ್ವಾಮಿ, ಈಗಿನ ಸಬ್ ಇನ್ಸ್‌ಪೆಕ್ಟರ್( ಪಿಎಸ್ಐ) ನಿಂಗರಾಜು ಹಾಗೂ ಕಾನ್ಸ್‌ಟೇಬಲ್ ಹಾಲೇಶ್ ನಾಯ್ಕ್‌ನನ್ನು ಸಸ್ಪೆಂಡ್ ಮಾಡಿ ಆದೇಶ ಹೊರಡಿಸಲಾಗಿದೆ.
ಕಳೆದ ಮಾರ್ಚ್ 24 ರಂದು ಐದೂವರೆ ವರ್ಷದ ಮಗು ವೆನ್ನಿಲಾಳನ್ನು ತಾಯಿ ಪ್ರಿಯಾಂಕ ಹಾಗೂ ಈಕೆಯ ಪ್ರಿಯಕರ ಮೋಹನ್ ಹತ್ಯೆ ಮಾಡಿ ಸಾಕ್ಷ್ಯ ನಾಶಕ್ಕೆ ಯತ್ನಿಸಿದ್ದು ಇಬ್ಬರನ್ನು ಬಂಧಿಸಲಾಗಿದೆ. ಆರಂಭದಲ್ಲಿ ಅಸಹಜ ಸಾವು ಪ್ರಕರಣ ದಾಖಲಾಗಿತ್ತು. ಮರಣೋತ್ತರ ಪರೀಕ್ಷೆಯಲ್ಲಿ ಮಗುವನ್ನು ಉಸಿರುಗಟ್ಟಿಸಿ ಸಾಯಿಸಲಾಗಿದೆ ಎಂದು ವರದಿ ಬಂದರೂ ಕೊಲೆ ಪ್ರಕರಣ ದಾಖಲಿಸದೇ ಆರೋಪಿಗಳನ್ನು ಬಂಧಿಸದೇ ನಿರ್ಲಕ್ಷ್ಯ ತೋರಿದ್ದರು. ಈ ಹಿನ್ನೆಲೆಯಲ್ಲಿ ಮೂವರು ಪೊಲೀಸರನ್ನು ಅಮಾನತು ಮಾಡಿ ಆದೇಶ ಮಾಡಲಾಗಿದೆ.

ಈ ಬಗ್ಗೆ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಸುದ್ದಿಗಾರರ ಜೊತೆ ಮಾತನಾಡಿ, ಜೂನ್





4ರಂದು ಕಾಡುಗೋಡಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿತ್ತು. ಮಾರ್ಚ್ 24ರಂದು ಮಗುವಿನ ಹತ್ಯೆಯಾಗಿತ್ತು. ಆರಂಭದಲ್ಲಿ ಅಸಹಜ ಸಾವು (ಯುಡಿಆರ್) ಪ್ರಕರಣ ದಾಖಲಿಸಲಾಗಿತ್ತು.
ನಂತರ ಕೊಲೆ ಪ್ರಕರಣವನ್ನಾಗಿ ಪರಿವರ್ತಿಸಲಾಗಿತ್ತು. ಈ ಕೇಸ್‌ನಲ್ಲಿ ಅಧಿಕಾರಿಗಳು ಲೋಪವೆಸಗಿದ್ದರಿಂದ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಹಾಗೂ ಕಾನ್ಸ್‌ಟೇಬಲ್ ಅಮಾನತು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕರ್ತವ್ಯಲೋಪದ ಹಿಂದೆ ಅಧಿಕಾರಿಗಳ ಉದ್ದೇಶ ಏನು ಎನ್ನುವುದನ್ನು ಪತ್ತೆ ಹಚ್ಚಲಾಗುತ್ತಿದೆ. ಸದ್ಯ ತನಿಖೆಗಾಗಿ ಬೇರೆ ಅಧಿಕಾರಿಯನ್ನು ನೇಮಕ ಮಾಡಲಾಗಿದೆ. ತನಿಖಾ ಲೋಪಗಳ ಬಗ್ಗೆ ಇಲಾಖೆಯಿಂದ ಹೆಚ್ಚಿನ ತನಿಖೆ ನಡೆಸಲಾಗುವುದು ಎಂದು ಆಯುಕ್ತರು ಮಾಹಿತಿ ನೀಡಿದ್ದರು.

**ಪ್ರಿಯಾಂಕಾ ಗ್ರಿಲ್ :** ಈ ನಡುವೆ ಕಾರಿನಲ್ಲಿ ಹೊಟ್ಟೆಗೆ ಒದ್ದು ಉಸಿರುಗಟ್ಟಿಸಿ ಪ್ರಿಯಕರ ಪುಟ್ಟ ಮಗು ವೆನ್ನಿಲಾ ಕೊಲೆಗೈದ ಪ್ರಕರಣದ ಸಂಬಂಧ ಕಳೆದ ನಾಲ್ಕು ದಿನಗಳಿಂದ ತಲೆಮರೆಸಿಕೊಂಡಿದ್ದ ಹೆತ್ತ ತಾಯಿ ಪ್ರಿಯಾಂಕಳನ್ನು ಕಾಡುಗೋಡಿ ಪೊಲೀಸರು ತೀವ್ರ ವಿಚಾರಣೆ ಕೈಗೊಂಡಿದ್ದಾರೆ.

ಸತತ ಕಾರ್ಯಾಚರಣೆ ನಡೆಸಿ ನಿನ್ನೆ ಹಾಸನ ಜಿಲ್ಲೆಯ ಸಕಲೇಶಪುರದ ಹೊಂ ಸ್ಟೇ ವೊಂದರಲ್ಲಿ ಬಂಧಿಸಿದ ತಾಯಿ ಪ್ರಿಯಾಂಕಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ 5 ದಿನಗಳ ಕಾಲ ಕಸ್ಟಡಿಗೆ ತೆಗೆದುಕೊಂಡು ವಿಚಾರಣೆ ನಡೆಸಲಾಗಿದೆ ಡಿಸಿಪಿ ಸೈದುಲು ಅಡಾವತ್ ತಿಳಿಸಿದ್ದಾರೆ.

ಮಗುವನ್ನು ಕೊಲೆ ಮಾಡಿರುವುದನ್ನು ಬಂಧಿತ ಪ್ರಿಯಕರ ಒಪ್ಪಿಕೊಂಡಿದ್ದಾನೆ. ಅದು ಪ್ರಿಯಾಂಕಾಗೆ ತಿಳಿದಿತ್ತಾ? ಇಬ್ಬರೂ ಸೇರಿ ಸಾಕ್ಷ್ಯ ನಾಶಪಡಿಸಲು ಯತ್ನಿಸಿದರಾ ಎನ್ನುವುದರ ಬಗ್ಗೆ ವಿಚಾರಣೆ ನಡೆಸಲಾಗಿದೆ.

ತಪ್ಪೊಪ್ಪಿಕೊಂಡ ಪ್ರಿಯಕರ: ಕಳೆದ ಮಾರ್ಚ್ 24ರಂದು ಆರೋಪಿ ಹಾಗೂ ಪ್ರಿಯಕರ ಕಾರಿನಲ್ಲಿ ಹೊರ 2ನೇಪುಟಕ್ಕೆ

## ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳಿ: ಸಹಾಯಕ ಆಯುಕ್ತ ಡಾ.ಹಂಪಣ್ಣ

ಧೈರ್ಯದ ದಾರಿ



**ರಾಯಚೂರು ಜೂನ್ 12:** ನಗರದ ಜಿಲ್ಲಾ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜೂನ್ 21 ರಂದು ಬೆಳಿಗ್ಗೆ 6.45ಗಂಟೆಗೆ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಯೋಜಿಸಲಾಗುವುದು.
ಸಾವಿರಾರು ಯೋಗಾಪಟುಗಳು ಭಾಗವಹಿಸುವರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ನಡೆಸಲಾಗುವುದು. ಇದಕ್ಕೆ ಬೇಕಾದ ಸಿದ್ಧತೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕೈಗೊಳ್ಳಬೇಕೆಂದು ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್ ಅವರು ಸೂಚಿಸಿದರು.
ಜೂನ್ 12ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಯೋಗವನ್ನು ಕೇವಲ ಒಂದೇ ದಿನಕ್ಕೆ ಸೀಮಿತಗೊಳಿಸದೇ ಪ್ರತಿದಿನ ಯೋಗಾಸನಗಳನ್ನು ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಆರೋಗ್ಯ ರಕ್ಷಣೆಗೆ ಯೋಗ ಅತ್ಯುತ್ತಮ ಸಾಧನವಾಗಿದ್ದು, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದರು.
ಅಂದು ಬೆಳಿಗ್ಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ,ಕಾಲೇಜು ವಿದ್ಯಾರ್ಥಿಗಳು ಹಾಗೂ ವಿವಿಧ ಸಂಸ್ಥೆಗಳ ಯೋಗ ಆಸಕ್ತರು ಭಾಗವಹಿಸಲಿದ್ದು, ಜೂನ್ 18 ಮತ್ತು 19ರಂದು ಯೋಗ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಬೇಕು. ಕಾರ್ಯಕ್ರಮದ ಯಶಸ್ವಿಗಾಗಿ ವಿವಿಧ ಇಲಾಖೆಗಳಿಗೆ ವಿವಿಧ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದ್ದು, 2ನೇಪುಟಕ್ಕೆ

## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತ ಜಾಥ




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ತಾಲೂಕು ಆಡಳಿತ ಹಾಗೂ ತಾಲೂಕು ಕಾನೂನು ಸೇವಾಸಮಿತಿ, ತಾಲೂಕು ನ್ಯಾಂಯವಾದಿಗಳ ಸಂಘ,ತಾಲೂಕು ಪಂಚಾಯಿತಿ,ಪೊಲೀಸ್ ಇಲಾಖೆ.ಕಾರ್ಮಿಕ ಇಲಾಖೆ,ಶಿಕ್ಷಣ ಇಲಾಖೆ, ಶಿಶುಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಅಂಗವಾಗಿ ನಡೆದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತ ಜಾಥಕ್ಕೆ ಕಿರಿಯ ಸಿವಿಲ್ ನ್ಯಾಯಾಧೀಶರಾದ ಆನಂದ ಹೆಚ್. ಕೊಣ್ಣರು ಬಾಲ ಕಾರ್ಮಿಕ ಪದ್ಧತಿ ವಿರೋಧಿ ಪ್ರತಿಜ್ಞಾ ವಿಧಿಯನ್ನು ಭೋದಿಸಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿ ಪ್ರತಿಯೊಬ್ಬ ಮಕ್ಕಳಿಗೂ ಕೂಡ ಶಿಕ್ಷಣ ಪಡಯುವ ಹಕ್ಕನ್ನು ನೀಡಲಾಗಿದು 14 ವರ್ಷದೊಳಗಿನ ಮಕ್ಕಳನ್ನು ಪಾಲಕರು ಮಕ್ಕಳಿಗೆ ದುಡಿಮೆಗೆ ಕಳುಹಿಸದೆ ಅವರಿಗೆ ಉತ್ತಮವಾದ ಶಿಕ್ಷಣವನ್ನು ನೀಡಿ ಉತ್ತಮ ಭವಿಷ್ಯವನ್ನು ರೂಪಿಸಿ ಬಾಲ ಕಾರ್ಮಿಕರನ್ನು ಕೆಲಸಕ್ಕೆ ಬಿಡುವುದು ಹಾಗೂ ಕೇಲಸಕ್ಕೆ ನೇಮಕ ಮಾಡಿಕೊಳ್ಳುವುದು ಕೂಡ ಅಪರಾಧವಾಗಿದು ಅಂತಹವರಿಗೆ ಕಾನೂನು ಪ್ರಕರ ಶಿಕ್ಷೆಕೂಡ ದೊರೆಯಲಿದೆ ಅದ್ದರಿಂದ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರ ಸಹಾಕರ ಅಗತ್ಯವಾಗಿದೆ ಎಂದು ತಿಳಿಸಿದರು.
ಪಟ್ಟಣದ ತಹಶೀಲ್ದಾರ್ ಕಚೇರಿಯ ಆವರಣದಿಂದ ಬಸವ ವೃತ್ತದವರೆಗೆ ಪ್ರಮುಖ ಬೀದಿಗಳಲ್ಲಿ ಶಾಲಾ ಮಕ್ಕಳಿಂದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ಜಾಗೃತ ಜಾಥ ನಡೆಯಿತು. ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರಪಾಟೀಲ್, ಉಪಾಧ್ಯಕ್ಷರಾದ ವಿಶ್ವನಾಥ ರಾಯಪ್ಪ, ಪಿ.ಐ. ಸೋಮಶೇಖರ ಎಸ್. ಕೆಂಚರೆಡ್ಡಿ, ಕಾರ್ಮಿಕ ಇಲಾಖೆ ತಾಲೂಕು ನಿರೀಕ್ಷಕರಾದ ಮಲ್ಲಪ್ಪ ದೊರೆ.ಶಿಕ್ಷಣ ಇಲಾಖಯೆ ಮಹೇಶ್, ಆರೋಗ್ಯ ಇಲಾಖೆಯ ಡಾ.ಶರಣಪ್ಪ, ದೈಹಿಕ ಶಿಕ್ಷಕ ಕ್ಯಾಮನಾಯ್ಕ್, ಸೇರಿದಂತೆ ಇನ್ನಿತರರು ಇದ್ದ

## ಸಿರವಾರ ನೀರಾವರಿ ಇಲಾಖೆಯ ಸರ್ಕಾರಿ ಆಸ್ತಿ ದುರ್ಬಳಕೆ: ಅಧಿಕಾರಿ ವಿರುದ್ಧ ಕ್ರಮಕ್ಕೆ ಕರವೇ ಆಗ್ರಹ

ಧೈರ್ಯದ ದಾರಿ



**ಸಿರವಾರ:** ನೀರಾವರಿ ಇಲಾಖೆಯ ವಿಭಾಗ-4ರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (AEE) ವಿಜಯಲಕ್ಷ್ಮಿ ಅವರು, ಇಲಾಖೆಯ ಸರ್ಕಾರಿ ಆಸ್ತಿಯನ್ನು ಅಕ್ರಮವಾಗಿ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುವಾರ್ ಶೆಟ್ಟಿ ಬಣ) ಪದಾಧಿಕಾರಿಗಳು ಕಾರ್ಯನಿರ್ವಾಹಕ ಇಂಜಿನಿಯರ್‌ಗೆ (EE) ದೂರು ಸಲ್ಲಿಸಿ, ಕಠಿಣ ಕ್ರಮಕ್ಕೆ ಆಗ್ರಹಿಸಿದ್ದಾರೆ.
ಆರೋಪಗಳೇನು?
ಇಲಾಖೆಯ ಅಧಿಕಾರಿ ವಿಜಯಲಕ್ಷ್ಮಿ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು, ಸಿರವಾರ ವಿಭಾಗ-4ರ ವ್ಯಾಪ್ತಿಗೆ ಬರುವ ಸರ್ಕಾರಿ ಸೊತ್ತುಗಳನ್ನು ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡುತ್ತಿದ್ದಾರೆ ಎಂದು ಸಂಘಟನೆಯ ಪದಾಧಿಕಾರಿಗಳು ಗಂಭೀರ ಆರೋಪ ಮಾಡಿದ್ದಾರೆ.
ಪ್ರಮುಖ ಆರೋಪಗಳು:
92ರ ಗೈಜ್ ರೂವ್ ಸಂಖ್ಯೆ 104ರಲ್ಲಿ ಇದ್ದ ಟಿನ್ ಶೀಟ್‌ಗಳು.ಕಬ್ಬಿಣದ ರಾಡ್‌ಗಳು ಮತ್ತು ವಿದ್ಯುತ್ ಕಂಬಗಳು. ಕಾಲುವೆ ದುರಸ್ತಿ ಕಾಮಗಾರಿಯಿಂದ ತೆಗೆದ ಕಲ್ಲು ಬಂಡೆಗಳು. ಈ ಮೇಲ್ಕಂಡ ಸಾಮಗ್ರಿಗಳನ್ನು ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ, ಅಧಿಕಾರಿಯೊಬ್ಬರು ಅಕ್ರಮವಾಗಿ ಮಾರಾಟ ಮಾಡಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.
ತನಿಖೆಗೆ ಆಗ್ರಹ ಹಾಗೂ ಎಚ್ಚರಿಕೆ:
ಈ ಅಕ್ರಮದ ಕುರಿತು ಕೂಡಲೇ ಉನ್ನತ ಮಟ್ಟದ ತನಿಖೆ ನಡೆಸಬೇಕು ಮತ್ತು ಸಂಬಂಧಪಟ್ಟ ಅಧಿಕಾರಿಯನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕು ಎಂದು ಕರವೇ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ. ಇಲಾಖೆಯು ಈ ದೂರಿನ ಬಗ್ಗೆ ನಿರ್ಲಕ್ಷ್ಯ ವಹಿಸಿದರೆ, ಮುಂದಿನ 3-4 ದಿನಗಳ ಒಳಗಾಗಿ ಕಚೇರಿಯ ಮುಂದೆ ಉಗ್ರ ಸ್ವರೂಪದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.
ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ಕೆ. ರಾಘವೇಂದ್ರ ಖಾಜನಗೌಡ, ತಾಲೂಕು ಕಾರ್ಯಾಧ್ಯಕ್ಷ ವೆಂಕಟೇಶ್ ಶಂಕ್ರಿ, ಪದಾಧಿಕಾರಿಗಳಾದ ನಾಗೇಶ್ ನಾಯಕ, ಲಿಂಗಯ್ಯ ನಾಯಕ, ಅಲಂಬಾಷ, ಅಂಜಿನಯ್ಯ ಪೂಜಾರಿ, ಗುರುದೇವ ಜಕ್ಕಲದಿನ್ನಿ, ದೇವರಾಜ್ ದೇವತಗಲ್, ನಾಗಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅನೀಲ್ ಕುಮಾರ್ ಕಾಣೆ: ಪತ್ತೆಗೆ ಪಶ್ಚಿಮ ಪೊಲೀಸರ ಮನವಿ



**ರಾಯಚೂರು ಜೂನ್ 12:** ಪಶ್ಚಿಮ ಪೊಲೀಸ್ ಠಾಣೆಯ ವ್ಯಾಪ್ತಿಯ ನಿವಾಸಿಯಾದ ಅನೀಲ್ ಕುಮಾರ್ ತಂದೆ ದಾವಿದ್ (30) ಎಂಬ ಯುವಕ ಜೂನ್ 11ರ ರಾತ್ರಿ 8.30ಕ್ಕೆ ಹೊರಗೆ ಹೋಗಿ ಬರುವದಾಗಿ ತಿಳಿಸಿ ಮನೆಯಿಂದ ಹೊರಗೆ ಹೋದವನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಸಂ:66/2026 ಕಲಂ ಮನುಷ್ಯ ಕಾಣೆ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.
ಯುವಕನ ಮೊಬೈಲ್ ನಂ: 7483318137ಗೆ ಕರೆ ಮಾಡಿದ್ದು, ಫೋನ್ ಸ್ವಿಚ್ ಆಫ್ ಬಂದಿತು. ನಂತರ ತಮ್ಮ ಸಂಬಂಧೀಕರು ಹಾಗೂ ಆತನ ಗೆಳೆಯರಲ್ಲಿ ವಿಚಾರ ಮಾಡಲಾಗಿ ಯಾವುದೇ ಮಾಹಿತಿ ಇರುವದಿಲ್ಲ. ನಂತರ ಅಂದಿನಿಂದ ಇಲ್ಲಿಯವರೆಗೆ ತನ್ನ ಮಗನಿಗಾಗಿ ರಾಯಚೂರು ನಗರದ ರೈಲ್ವೇ ಸ್ಟೇಷನ್, ಬಸ್ ನಿಲ್ದಾಣದ ಹಾಗೂ ವಿವಿಧ ಬಡಾವಣೆಗಳಲ್ಲಿ ಹುಡುಕಾಡ ಮಾಡಲಾಗಿದ್ದು, ಎಲ್ಲಿಯೂ ಸಿಕ್ಕಿಲ್ಲ. ಕಾಣೆಯಾದ ಯುವಕನ ಚಹರೆ ಪಟ್ಟಿ: ವಯಸ್ಸು: 30 ವರ್ಷ, 5.6 ಅಡಿ ಎತ್ತರ, ಕೆಂಪುಬಣ್ಣ, ದುಂಡುಮುಖ, ಸಾದಾರಣ ಮೈಕಟ್ಟು, ತಲೆಯಲ್ಲಿ ಕಪ್ಪು ಕೂದಲು ಹೊಂದಿದ್ದಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತೇನೆ.
ಈ ಚಹರೆವುಳ್ಳ ವ್ಯಕ್ತಿಯು ಕಂಡು ಬಂದಲ್ಲಿ ಪಶ್ಚಿಮ ಪೊಲೀಸ ಠಾಣೆಯ ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803847, ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532-232570, ಸಿ.ಪಿ.ಐ ಪಶ್ಚಿಮ ವೃತ್ತ, ರಾಯಚೂರು ದೂರವಾಣಿ ಸಂಖ್ಯೆ: 08532-226856, 9480803831, ಜಿಲ್ಲಾ ನಿಸ್ತಂತು ಘಟಕ ರಾಯಚೂರು ದೂರವಾಣಿ ಸಂಖ್ಯೆ: 08532-235635, 9480803800ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಪಶ್ಚಿಮ ಪೊಲೀಸ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಿ: ಶಾಸಕ ಬಸನಗೌಡ ದದ್ದಲ್




ಧೈರ್ಯದ ದಾರಿ

**ರಾಯಚೂರು ಜೂನ್ 12:** ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಮುಂಗಾರು ಬಿತ್ತನೆ ಪ್ರಾರಂಭವಾಗಲಿದ್ದು, ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ಸಕಾಲದಲ್ಲಿ ನಿಗದಿತ ಬೆಲೆಯಲ್ಲಿ ಒದಗಿಸಬೇಕು. ರೈತರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.
ಜೂನ್ 12ರ ಶುಕ್ರವಾರ ದಂದು ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಕ್ಷೇತ್ರದಲ್ಲಿ ಅಗತ್ಯ ಪ್ರಮಾಣದ ರಸಗೊಬ್ಬರವನ್ನು ಕಾಯ್ದಿರಿಸಲು ಮತ್ತು ಅದರ ಸಕಾಲಿಕ ವಿತರಣೆಗೆ ಕ್ರಮ ಕೈಗೊಳ್ಳಬೇಕು. ರೈತರಿಗೆ ಸಕಾಲದಲ್ಲಿ ಗೊಬ್ಬರ ಸಿಗುವಂತೆ ವ್ಯವಸ್ಥೆ ಮಾಡಬೇಕು. ರಸಗೊಬ್ಬರ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸುವುದನ್ನು ತಡೆಗಟ್ಟಲು ಕೃಷಿ ಇಲಾಖೆ ಅಧಿಕಾರಿಗಳು ನಿರಂತರ ನಿಗಾವಹಿಸಬೇಕು ಎಂದು ಹೇಳಿದರು.
ರಾಯಚೂರು ತಾಲೂಕಿನ ಬಹುತೇಕ ಗ್ರಾಮಗಳು ನೆರೆ ರಾಜ್ಯಗಳಿಗೆ ಸಂಪರ್ಕಿಸುವುದರಿಂದ ಇಲ್ಲಿನ ರಸಗೊಬ್ಬರ ಬೇರೆ ರಾಜ್ಯಗಳಿಗೆ ಹೋಗುತ್ತದೆ. ಇದರಿಂದ ರಾಜ್ಯದಲ್ಲಿ ರಸಗೊಬ್ಬರದ ಕೊರತೆ ಹೆಚ್ಚುತ್ತದೆ. ಆದ್ದರಿಂದ ಚೆಕ್ ಪೋಸ್ಟ್ ಗಳಲ್ಲಿ ಸರಿಯಾಗಿ ತಪಾಸಣೆ ನಡೆಸಬೇಕೆಂದು ಸಂಬಂಧಿಸಿದ 2ನೇಪುಟಕ್ಕೆ

ಮೊದಲನೇ ಪುಟದಿಂದ

# ವೆನ್ನಿಲಾ ಕೊಲೆ ಪ್ರಕರಣ: ಕರ್ತವ್ಯಲೋಪಕ್ಕೆ ಮೂವರು ಪೊಲೀಸರ ಅಮಾನತು

ಹೋಗಿದ್ದ ವೇಳೆ ಮಗು ಐಸ್ ಕ್ರೀಂ ಕೇಳಿತ್ತು. ಕೊಟ್ಟಐಸ್‌ಕ್ರೀಂ ಬೇಡವೆಂದು ಬೇರೆಯದ್ದನ್ನು ತಂದುಕೊಡುವಂತೆ ಹಠ ಹಿಡಿದಿತ್ತು. ಆಗ ಆರೋಪಿಯು ಕೋಪಗೊಂಡು ಮಗುವಿನ ಹೊಟ್ಟೆಗೆ ಹೊಡೆದಿದ್ದ. ನೋವು ತಾಳದೆ ಅಳುತ್ತಿದ್ದಂತೆ ಉಸಿರುಗಟ್ಟಿಸಿ, ಕೊಲೆ ಮಾಡಿ ಕಾರಿನ ಹಿಂಭಾಗದ ಸೀಟಿನಲ್ಲಿ ಮಲಗಿಸಿದ್ದ' ಎಂದಿದ್ದಾರೆ.
ಶಾಪಿಂಗ್ ಮುಗಿಸಿ ಪ್ರಿಯಾಂಕ ಕಾರಿನ ಬಳಿ ವಾಪಸ್ ಬಂದಾಗ ಆಕೆಗೆ ಮಗು ಸಾವನ್ನಪ್ಪಿರುವ ವಿಷಯ ತಿಳಿದಿದೆ. ಆದರೆ, ಹೆತ್ತ ಮಗಳು ಶವವಾಗಿ ಬಿದ್ದಿದ್ದರೂ ಆ ಕಲ್ಲೆದೆಯ ತಾಯಿಯ ಮನಸ್ಸು ಕರಗಲಿಲ್ಲ. ಅಲ್ಲಿಂದ ರಾತ್ರಿ 9 ಗಂಟೆಗೆ ಇಬ್ಬರೂ ಕಾರಿನಲ್ಲಿ ಮಗುವಿನ ಶವವನ್ನು ಇಟ್ಟುಕೊಂಡೇ ಕೋಲಾರದತ್ತ ಪ್ರಯಾಣ ಬೆಳೆಸಿದ್ದಾರೆ.

ಕೋಲಾರದ ಕೆಫೆ ಕಾಫಿ ಡೇನಲ್ಲಿ ಪ್ರಿಯಾಂಕ ತನ್ನ ಪ್ರಿಯಕರನೊಂದಿಗೆ ಸೇರಿ ಅತ್ಯಂತ ಸಡಗರದಿಂದ ಹುಟ್ಟುಹಬ್ಬವನ್ನು ಆಚರಿಸಿಕೊಂಡಿದ್ದಾಳೆ.

12ಗಂಟೆ ಶವದ ಜೊತೆ: ರಾತ್ರಿ 1 ಗಂಟೆಯವರೆಗೂ ಹುಟ್ಟುಹಬ್ಬದ ಸಂಭ್ರಮ ಮುಗಿಸಿ, ಮುಂಜಾನೆ 2:30ರ ಸುಮಾರಿಗೆ ವಾಪಸ್ ವಿಲ್ಲಾಗೆ ಬಂದಿದ್ದಾರೆ. ಮರುದಿನ ಬೆಳಗ್ಗೆ 9 ಗಂಟೆಯವರೆಗೂ, ಅಂದರೆ ಸುಮಾರು 12 ಗಂಟೆಗಳ ಕಾಲ ಮಗುವಿನ ಶವದೊಂದಿಗೇ ಈ ಇಬ್ಬರು ಆರೋಪಿಗಳು ಕಾಲ ಕಳೆದಿರುವುದು ವಿಚಾರಣೆಯಲ್ಲಿ ಪತ್ತೆಯಾಗಿದೆ.

'ಮಾರನೇ ದಿನ ಮಗು ಮೃತಪಟ್ಟಿರುವ ವಿಚಾರ ಗೊತ್ತಾಗಿತ್ತು. ಪೊಲೀಸ್ ವಿಚಾರಣೆ ವೇಳೆ ಆರೋಪಿಗಳಿಬ್ಬರೂ ನೀಡಿದ್ದ ಹೇಳಿಕೆ ಅನುಮಾನ ಉಂಟಾಗಿತ್ತು.ಉಸಿರುಗಟ್ಟಿ ಮಗು ಸಾವನ್ನಪ್ಪಿದೆ ಎಂದು ವೈದ್ಯರು ವರದಿ ನೀಡಿದ್ದರೂ ಪೊಲೀಸರು ಕ್ರಮ ಕೈಗೊಂಡಿರಲಿಲ್ಲ. ಈ ಬಗ್ಗೆ ಆರೋಪಿಯ ಪತಿ ಪ್ರವೀಣ್ ವಿದೇಶದಲ್ಲಿರುವ ತನ್ನ ಸಹೋದರಿ, ಮಕ್ಕಳ ವೈದ್ಯೆಗೆ ವರದಿ ಕಳುಹಿಸಿ, ಪೊಲೀಸರು ಪ್ರಕರಣ ದಾಖಲಿಸಿಕೊಳ್ಳುತ್ತಿಲ್ಲ ಎಂದು ನೋವು ತೋಡಿಕೊಂಡಿದ್ದರು.

ಲೋಕಾಯುಕ್ತಕ್ಕೆ ದೂರು: ಸಹೋದರಿಯು ಲೋಕಾಯುಕ್ತ ಐಜಿಪಿಗೆ ಕರೆ ಮಾಡಿ ವಿಷಯ ತಿಳಿಸಿದ್ದರು. ಅದಕ್ಕೆ ಪೂರಕವಾಗಿ ಪ್ರವೀಣ್ ಅವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು.
ಎಸಿಪಿ ನೇತೃತ್ವದಲ್ಲಿ ತನಿಖೆ ನಡೆಸಿದಾಗ, ಈ ಹಿಂದಿನ ಕಾಡುಗೋಡಿ ಇನ್‌ಸ್ಪೆಕ್ಟರ್ ರಂಗಸ್ವಾಮಿ, (ಪ್ರಸ್ತುತ ವರ್ಗಾವಣೆಗೊಂಡಿದ್ದಾರೆ) ಹಾಲಿ ಪಿಎಸ್‌ಐ ನಿಂಗರಾಜು ಹಾಗೂ ಸುಕೊ ತಂಡವು ತನಿಖೆ ನಡೆಸದೆ ನಿರ್ಲಕ್ಷ್ಯ ತೋರಿದೆ' ಎಂದು ಲೋಕಾಯುಕ್ತ ವರದಿಯಲ್ಲಿ ಉಲ್ಲೇಖ ಮಾಡಲಾಗಿತ್ತು.

# ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಿ: ಸಹಾಯಕ ಆಯುಕ್ತ ಡಾ.ಹಂಪಣ್ಣ

ಅವುಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸಹಾಯಕ ಆಯುಕ್ತರು ಸೂಚಿಸಿದರು.
ಯೋಗ ನಡೆಯುವ ಸ್ಥಳದಲ್ಲಿ ಆಂಬುಲೆನ್ಸ್, ಕುಡಿಯುವ ನೀರು ಹಾಗೂ ಇನ್ನಿತರ ಮೂಲ ಸೌಕರ್ಯಗಳನ್ನು ಒದಗಿಸಬೇಕು. ಮಹಾನಗರ ಪಾಲಿಕೆಯಿಂದ ಸ್ವಚ್ಚತೆ ಹಾಗೂ ನೀರಿನ ವ್ಯವಸ್ಥೆ ಹಾಗೂ ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಯವರು, ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ತಮಗೆ ಅನುಕೂಲಕರವಾದ ಸಮಯದಲ್ಲಿ ಆನ್‌ಲೈನ್ ಮೂಲಕ ಯೋಗ ತರಬೇತಿಯನ್ನು ಪಡೆಯಬಹುದು. ಆನ್‌ಲೈನ್ ಮೂಲಕ ಯೋಗ ತರಬೇತಿಗೆ ನೋಂದಾಯಿಸಿಕೊಂಡು ಯೋಗಾಭ್ಯಾಸ ಮಾಡಬಹುದು ಎಂದು ಅವರು ಹೇಳಿದರು.
ಇದೇ ಸಂದರ್ಭದಲ್ಲಿ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪ್ರವೀಣ ಕುಮಾರ್, ಪದವಿ ಪೂರ್ವ ಕಾಲೇಜಿನ ಉಪ ನಿರ್ದೇಶಕ ಸೋಮಶೇಖರಪ್ಪ ಹೋಕ್ರಾಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸುನೀತಾ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ಆಹಾರ ಇಲಾಖೆ ವ್ಯವಸ್ಥಾಪಕ ಹರೀಶ್ ಡಿ., ರಾಯಚೂರು ಮಹಾನಗರ ಪಾಲಿಕೆಯ ಸಮುದಾಯ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ವಿವಿಧ ಸಂಘ, ಸಂಸ್ಥೆಯ ಮುಖಂಡರು ಸಭೆಯಲ್ಲಿ ಇದ್ದರು.

## ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಿ: ಶಾಸಕ ಬಸನಗೌಡ ದದ್ದಲ್

ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಸರ್ಕಾರದ ಯೋಜನೆಗಳನ್ನು ಬಡವರಿಗೆ ತಲುಪಿಸಲು ಪ್ರಯತ್ನಿಸಬೇಕು. ಸಾರ್ವಜನಿಕರಿಗೆ ಸ್ಪಂಧಿಸಬೇಕು. ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಯೋಜನೆಗಳನ್ನು ಸಮರ್ಪಕವಾಗಿ ಸಾರ್ವಜನಿಕರೊಗೆ ಮುಟ್ಟಿಸಬೇಕು. ಸಭೆಯಲ್ಲಿ ಚರ್ಚಿಸಲಾದ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಮಾದಕ ವಸ್ತುಗಳ ಚಟುವಟಿಕೆ ಆಗದಂತೆ ಗಮನಹರಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
ಗ್ರಾಮೀಣ ಕುಡಿಯುವ ನೀರು ಮತ್ತು ನೈಮಲ್ಯ ಇಲಾಖೆಗೆ ಸಂಬಂಧಿಸಿದಂತೆ ಮಟಮಾರಿ ಗ್ರಾಮ ಕುಡಿಯುವ ನೀರಿನ ಟ್ಯಾಂಕ್ ನಿರ್ಮಾಣ ಕುರಿತು ಕಳೆದ ಕೆಡಿಪಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಈ ವರೆಗೂ ಸ್ಥಳಿಯರೊಂದಿಗೆ ಚರ್ಚಿಸಲಾಗುತ್ತಿದೆ ಎಂದು ಈ ಸಭೆಯಲ್ಲಿ ವರದಿ ನೀಡಿದ್ದೀರಿ. ಮೂರೂವರೆ ತಿಂಗಳಾದರೂ ಇನ್ನೂ ಚರ್ಚಿಸಲಾಗುತ್ತದೆ ಎಂದು ಉತ್ತರ ಕೊಡುವುದು ಸರಿಯಲ್ಲ. ಕೂಡಲೇ ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು ಶಾಸಕರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.
ಕಲಮಲಾ ಗ್ರಾಮದ ಕುಡಿಯುವ ನೀರಿನ ಕೆರೆ ಉದ್ಘಾಟನೆಯಾಗಿ ಹಲವು ದಿನಗಳಾದರೂ ಕೆರೆಯಿಂದ ಸುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಮಾಡಲಾಗುತ್ತಿಲ್ಲ. ಕೂಡಲೇ ಎಲ್ಲಾ ಕಾರ್ಯಗಳನ್ನು ಮುಗಿಸಿ ಜನರಿಗೆ ಅನುಕೂಲ ಮಾಡಬೇಕು ಎಂದರು.
ಇದೇ ಸಂದರ್ಭದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ಆರ್‌ಎಪಿಎಂಸಿ ಅಧ್ಯಕ್ಷ ಜಯಂತರಾವ್ ಪತಂಗೆ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ್ ಕಿಶೋರ ಪಾಟೀಲ್, ನಾಮ ನಿರ್ದೇಶಿತ ಸದಸ್ಯರಾದ ಈರೇಶ, ತಿಮ್ಮಪ್ಪ ನಾಯಕ, ಜಿಂದಪ್ಪ, ಶರಣಬಸವ, ರಾಯಚೂರು ವಿವಿ ಸಿಂಡಿಕೇಟ್ ಸದಸ್ಯ ಚನ್ನಬಸವ, ಎಪಿಎಂಸಿ ಉಪಾಧ್ಯಕ್ಷ ಬಸೀರ್ ಅಹ್ಮದ್, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ತಾಲೂಕು ಪಂಚಾಯತ್ ಆಡಳಿತಾಧಿಕಾರಿ ವನಿತಾ, ಡಿವೈಎಸ್‌ಪಿ ಶಾಂತವೀರ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ಇತರರು ಇದ್ದರು.

## ಮಾನವಿ ಪುರಸಭೆ: ಪ್ರಧಾನಮಂತ್ರಿ ಅವಾಜ್ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು ಜೂನ್ 12:** ಜಿಲ್ಲೆಯ ಮಾನವಿ ಪುರಸಭೆಯಿಂದ 2026-27ನೇ ಸಾಲಿನ ನಗರ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಅವಾಜ್ ಯೋಜನೆ (ನಗರ) 2.0 ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಈ ಯೋಜನೆ ಅಡಿ ವಸತಿ ರಹಿತ/ ನಿವೇಶ ರಹಿತ ಒಂಟಿ ಮಹಿಳೆಯವರು, ವಿಕಲಚೇತನರು, ಹಿರಿಯ ನಾಗರೀಕರು, ತೃತಿಯ ಲಿಂಗಿಗಳು, ಎಸ್.ಸಿ/ ಎಸ್.ಟಿ./ ಹಿಂದುಳಿದ ಅಲ್ಪ ಸಂಖ್ಯಾತ ವರ್ಗದವರು ಸ್ವಚ್ಛತಾ ಕಾರ್ಮಿಕರು, ಪಿ.ಎಮ್.ಸ್ವಾಧಿನಿ ಯೋಜನೆ ಅಡಿ ಗುರುತಿ ಸಲ್ಪಟ್ಟ ಬೀದಿ ಬದಿ ವ್ಯಾಪಾರಿಗಳ ಮತ್ತು ಪ್ರಧಾನ ಮಂತ್ರಿ ವಿಶ್ವಕರ್ಮ ಯೋಜನೆ ಅಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು ಮತ್ತು ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು ವೆಬ್‌ಸೈಟ್ ವಿಳಾಸ: URL:http//pmay-urban.gov.in ರಲ್ಲಿ ಅಥವಾ ಸಿಎಸ್‌ಸಿ ಕೇಂದ್ರಗಳಲ್ಲಿ ಸ್ವತಃ ಅರ್ಜಿಗಳನ್ನು ಜೂನ್ 30ರೊಳಗಾಗಿ ಸಲ್ಲಿಸಬಹುದು. ಅರ್ಜಿಗಳನ್ನು ಪುರಸಭೆಗೆ ಕಚೇರಿಯ ಅವಧಿಯಲ್ಲಿ ಕಚೇರಿಗೆ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ವಸತಿ ರಹಿತರು ನಿವೇಶನ ದಾಖಲೆಗಳಾದ ಹಕ್ಕು ಪತ್ರ/ ಕ್ರಯ ಪತ್ರ/ ದಾನ ಪತ್ರ/ ಉಡುಗೊರೆ ಪತ್ರ/ಖಾತಾ ದಾಖಲೆಗಳನ್ನು ಲಗತ್ತಿಸಿ ಕುಟುಂಬ ಸದಸ್ಯರ ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕ ಪ್ರತಿ ಮತ್ತು ನಿಗಧಿತ ನಮೂನೆ (Annexure-2A/ 2B/2C) ರಲ್ಲಿ Self Undertaking ಸಲ್ಲಿಸುವುದು. ವಸತಿ/ ನಿವೇಶನ ರಹಿತರು ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳನ್ನು ಹೊರತುಪಡಿಸಿ, ಇತರೆ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು.
ಹೆಚ್ಚಿನ ಮಾಹಿತಿಗಾಗಿ ಮಾನವಿ ಪುರಸಭೆಯ ಕಚೇರಿಯನ್ನು ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 15ರಂದು ಜೆಸ್ಕಾಂ ಗ್ರಾಹಕರ ಕುಂದು ಕೊರತೆ ಸಭೆ

**ರಾಯಚೂರು ಜೂನ್ 12:** ರಾಯಚೂರು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕಚೇರಿಯಲ್ಲಿ ಜೂನ್ 15ರ ಬೆಳಿಗ್ಗೆ 10.30ಗಂಟೆಗೆ ಗ್ರಾಹಕರ ಕುಂದು ಕೊರತೆ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕ ಪದ್ಧತಿ ನಿವಾರಣೆಗೆ ಜಾಗೃತಿ ಅತ್ಯವಶ್ಯಕ: ನ್ಯಾ. ಸಿದ್ದರಾಮಪ್ಪ ಕಲ್ಯಾಣರಾವ್



ಧೈರ್ಯದ ದಾರಿ

**ರಾಯಚೂರು ಜೂನ್ 12:** ಸಮಾಜದಲ್ಲಿ ಬೇರು ಬಿಟ್ಟಿರುವ ಹಲವು ಸಾಮಾಜಿಕ ಪಿಡುಗುಗಳಿಗೆ ಶಿಕ್ಷಣವೇ ಅಸ್ತ್ರ. ಅದರಂತೆ ಬಾಲಕಾರ್ಮಿಕ ಪದ್ಧತಿ ನಿವಾರಣೆಯಾಗಬೇಕಾದರೆ ಎಲ್ಲರಿಗೂ ಶಿಕ್ಷಣ ಸಿಗುವಂತಾಗಬೇಕು. ಅರಿವಿನ ಕೊರತೆಯಿಂದಾಗಿಯೇ ಇಂತಹ ಪದ್ಧತಿಗಳು ಇಂದಿಗೂ ಜೀವಂತವಾಗಿವೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು.
ಜೂನ್ 12ರ ಶುಕ್ರವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ
ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೋಲಿಸ್ ಇಲಾಖೆ, ಮಹಾನಗರ ಪಾಲಿಕೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಘಟಕ, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಜಿಲ್ಲಾ ಬಾಲಕಾರ್ಮಿಕ ಯೊಜನೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.
ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕುರಿತು ಎಲ್ಲ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯ ನಿರ್ವಹಣೆ ಮಾಡಬೇಕು. ವಿವಿಧ ಕಾರಣಗಳಿಗೆ ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ ಶಿಕ್ಷಣ ನೀಡಿದಾಗ ಮಾತ್ರ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯಾಗುತ್ತದೆ ಎಂದರು.
ಹದಿನಾಲ್ಕು ವರ್ಷದೊಳಗಿನ ಮಕ್ಕಳನ್ನು ಅವರ ಶಿಕ್ಷಣ ಹಕ್ಕಿನಿಂದ ವಂಚಿಸಿ, ದುಡಿಮೆಗೆ ಬಳಸುವುದು ಕಾನೂನು ಪ್ರಕಾರ ಅಪರಾಧ. ಇದಕ್ಕಾಗಿ, ಮಕ್ಕಳಿಂದ ದುಡಿಸಿಕೊಳ್ಳುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಕಾನೂನಿನಡಿ ಶಿಕ್ಷೆ ವಿಧಿಸಲು ಅವಕಾಶವಿದೆ. ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರುದ್ಧ ನಿಗಾ ಇಡಬೇಕು ಎಂದು ಸಲಹೆ ನೀಡಿದರು.
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಅವರು ಮಾತನಾಡಿ, ಬಾಲಕಾರ್ಮಿಕ ಪದ್ದತಿಯನ್ನ ಬೇರು ಸಮೇತ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ. ಸರ್ಕಾರದ ಈ ಪ್ರಯತ್ನಕ್ಕೆ ಸಂಘ￼ಸಂಸ್ಥೆ, ಸಂಘಟನೆಗಳು ಹಾಗೂ ಸಮುದಾಯಗಳು ಸಹ ಕೈ ಜೋಡಿಸಿದರೆ ಈ ಪದ್ಧತಿಗೆ ಸಂಪೂರ್ಣ ಕಡಿವಾಣ ಬೀಳಲಿದೆ ಎಂದು ಹೇಳಿದರು.
ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ ಅವರು ಮಾತನಾಡಿ, ಬಾಲ ಕಾರ್ಮಿಕರನ್ನು ಪತ್ತೆಗೆ ಸಾರ್ವಜನಿಕರು ಸಹ ನೆರವಾಗಬೇಕು. ತಮ್ಮ ಸುತ್ತಮುತ್ತಲಿನ ಅಂಗಡಿ, ಹೋಟೆಲ್, ಕಾರ್ಖಾನೆ, ತೋಟ ಸೇರಿದಂತೆ ಎಲ್ಲಿಯಾದರೂ ಬಾಲ ಕಾರ್ಮಿಕರು ಕಂಡುಬಂದಲ್ಲಿ ಕಾರ್ಮಿಕ ಇಲಾಖೆಯ 1098 ಸಹಾಯವಾಣಿಗೆ ಮಾಹಿತಿ ನೀಡಬೇಕು. ಆಗ ಅಧಿಕಾರಿಗಳು ಬಂದು ಮಕ್ಕಳನ್ನು ರಕ್ಷಿಸುತ್ತಾರೆ ಎಂದರು.
14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986 ಹಾಗೂ ತಿದ್ದುಪಡಿ ಕಾಯ್ದೆ-2016ರಡಿ ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು.
ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ



ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡುವುದರ ಮೂಲಕ ಸಮಾಜದಲ್ಲಿರುವ ಬಾಲಕಾರ್ಮಿಕ ಪದ್ಧತಿ ಎಂಬ ಪಿಡುಗನ್ನು ಹೋಗಲಾಡಿಸಲು ಎಲ್ಲಾರು ಸಹಕಾರ ನೀಡಬೇಕೆಂದರು.

ಪ್ರಮಾಣ ವಚನ: ನಾನು ಸತ್ಯವಾಗಿ, ಪ್ರಾಮಾಣಿಕವಾಗಿ ಹಾಗೂ ಆತ್ಮಸಾಕ್ಷಿಯಾಗಿ ಪ್ರಮಾಣ ಮಾಡುವುದೇನೆಂದರೆ, ನಾನು ವಾಸಿಸುವ ಸುತ್ತ ಮುತ್ತಲಿನ ಪ್ರದೇಶ ಹಾಗೂ ನಾನು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ಬಾಲಕಾರ್ಮಿಕರು ಕಂಡುಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುತ್ತೇನೆ.
ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ತೊಡಗಿಸಿಕೊಂಡು ತಯಾರಿಸಲ್ಪಟ್ಟ ಯಾವುದೇ ವಸ್ತುವನ್ನು ಉಪಯೋಗಿಸುವುದಿಲ್ಲ ಮತ್ತು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಸೇವೆಯನ್ನು ಪಡೆಯುವುದಿಲ್ಲವೆಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನವಾದ ಇಂದು ಪ್ರಮಾಣ ಮಾಡುತ್ತೇನೆ ಎಂದು ರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮದ ಅಂಗವಾಗಿ ಪ್ರಮಾಣ ವಚನ ಭೋದಿಸಿದರು.

ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಜಾಥಾ: ಬೆಳಿಗ್ಗೆ 09.20ರ ನಂತರ ನಗರದ ತಹಶಿಲ್ದಾರ್ ಕಾರ್ಯಾಲಯದಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.
ಜಾಥಾದಲ್ಲಿ ಪ್ರತಿಯೊಬ್ಬ ಮಗುವಿನ ಹಕ್ಕು ಶಿಕ್ಷಣ, ದುಡಿಮೆಯಲ್ಲ. ಕೈಯಲ್ಲಿ ಕೆಲಸದ ಆಯುಧ ಬೇಡ, ಜ್ಞಾನದ ಪುಸ್ತಕವಿರಲಿ. ಬಾಲಕಾರ್ಮಿಕ ಪದ್ಧತಿ ದೇಶಕ್ಕೆ ಕಳಂಕ.! ಬಾಲ್ಯದಲ್ಲಿ ದುಡಿಮೆ ಮಕ್ಕಳ ಹಕ್ಕುಗಳ ಕಸಿತ, ಶಿಕ್ಷಣವೇ ಅವರ ನಿಜವಾದ ಭವಿಷ್ಯ ಎಂಬ ಘೋಷಣೆಗಳ ಸಾರ್ವಜನಿಕರ ಗಮನ ಸೆಳೆಯಿತು.
ಜಾಥಾದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸೇರಿದಂತೆ ಇತರರು ವಿದ್ಯಾರ್ಥಿಗಳಿಗೆ ಸಾಥ್ ನೀಡಿದರು.
ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸುದರ್ಶನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ರಾಯಚೂರು ವೃತ್ತ ಕಾರ್ಮಿಕ ನಿರೀಕ್ಷಕಿ ಕುಮಾರಿ ಪ್ರಿಯಾಂಕ ಸೇರಿದಂತೆ ಕಾರ್ಮಿಕ ಇಲಾಖೆಯ ವಿವಿಧ ಅಧಿಕಾರಿಗಳು, ವಿವಿಧ ಶಾಲಾ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

## ಶವ ಸಂಸ್ಕಾರ ಪೆಟ್ಟಿಗೆ ಹಸ್ತಾಂತರಿಸಲು ಅರ್ಜಿ ಆಹ್ವಾನ

**ರಾಯಚೂರು ಜೂನ್ 12:** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿ ಪ್ರದೇಶದಲ್ಲಿ 2019-20ನೇ ಸಾಲಿನ ನಗರಸಭೆಯ ನಿಧಿಯಲ್ಲಿ ಶೇ.29 ಯೋಜನೆಯಲ್ಲಿ ಕೊಟೇಷನ್ ಮುಖಾಂತರ ಖರೀದಿಸಿರುವ ಶವ ಸಂಸ್ಕಾರ ಪೆಟ್ಟಿಗೆಯನ್ನು ಸಫಾಯಿ ಕರ್ಮಚಾರಿ ಜನಾಂಗದವರಿಗೆ ಹಸ್ತಾಂತರಿಸಲು ಸಮಾಜದ ಸಂಘದ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಶವ ಸಂಸ್ಕಾರ ಪೆಟ್ಟಿಗೆಯನ್ನು ಇಡುವುದಕ್ಕೆ ಕೋಣೆಯ ವ್ಯವಸ್ಥೆ ಇರತಕ್ಕದ್ದು. ಸಫಾಯಿ ಕರ್ಮಚಾರಿ ಜನಾಂಗಕ್ಕೆ ಮಾತ್ರ ಸೀಮಿತವಾಗಿರುತ್ತದೆ. ಸಫಾಯಿ ಕರ್ಮಚಾರಿ ಜನಾಂಗದ ಸಂಘವು Society Registration Act 1860/ Trust Act 1860 ನಲ್ಲಿ ನೊಂದಾಯಿತವಾಗಿರುವ ಸಂಘದ ವತಿಯಿಂದ ಜುಲೈ 11ರ ಸಂಜೆ 5ಗಂಟೆಯೊಳಗಾಗಿ ಪಾಲಿಕೆಯ ಡೇ-ನಲ್ಮ್ ವಿಭಾಗಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವಸೂಗೂರು ವ್ಯಾಪ್ತಿಯಲ್ಲಿ ಜೂನ್ 14ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜೂನ್ 12 :** ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಯ 11ಕೆವಿಯಲ್ಲಿ ಮರುವಾಹಕ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ದೇವಸೂಗೂರು ನೀರು ಸರಬರಾಜು ಫೀಡರ್‌ನಲ್ಲಿ ಜೂನ್ 14ರ ಬೆಳಿಗ್ಗೆ 10ರಿಂದ ಸಂಜೆ 6ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ದೇವಸೂಗೂರು, ರಾಘವೇಂದ್ರ ಕಾಲೋನಿ, ಜನತಾ ಕಾಲೋನಿ, ಯದ್ಲಾಪುರ ಸೇರಿದಂತೆ ಸುತ್ತಮುತ್ತಲ್ಲಿನ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಶಕ್ತಿನಗರ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಧೈರ್ಯದ ದಾರಿ



## ಅಕ್ರಮ ಚಟುವಟಿಕೆ ತಡೆಯುವಲ್ಲಿ ವಿಫಲರಾದ ಅಧಿಕಾರಿಗಳ ವಿರುದ್ಧವೂ ಕ್ರಮ: ಜಿಲ್ಲಾಧಿಕಾರಿ



**ಯಾದಗಿರಿ: ಜೂ.12:**ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು, ಮುರಂ ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಜಿಲ್ಲಾಡಳಿತ ಕಠಿಣ ಕ್ರಮ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅವರು ಎಚ್ಚರಿಕೆ ನೀಡಿದ್ದಾರೆ.

ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳು, ಮುರಂ ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆಯನ್ನು ತಕ್ಷಣ ತಡೆಗಟ್ಟಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಜಿಲ್ಲೆಯ ಸುರಪುರ, ಶಹಾಪುರ, ವಡಗೇರಾ ಸೇರಿದಂತೆ ವಿವಿಧ ತಾಲೂಕುಗಳ ವ್ಯಾಪ್ತಿಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದೆ ಎಂಬ ಹಲವು ದೂರುಗಳು ಬಂದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಎಚ್ಚೆತ್ತುಕೊಂಡಿದ್ದು, ಅಕ್ರಮ ಚಟುವಟಿಕೆಗಳಲ್ಲಿ ಬಳಸಲಾಗುತ್ತಿರುವ ಯಂತ್ರೋಪಕರಣಗಳು ಹಾಗೂ ವಾಹನಗಳನ್ನು ಜಪ್ತಿ ಮಾಡಿ ಸಂಬಂಧಪಟ್ಟವರ ವಿರುದ್ಧ ಪ್ರಕರಣ ದಾಖಲಿಸುವಂತೆ ನಿರ್ದೇಶನ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ 2026ರ ಜೂನ್ 10ರಂದು ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ವ್ಯಾಪ್ತಿಯಲ್ಲಿ ಅಕ್ರಮ ಮುರಂ ಗಣಿಗಾರಿಕೆಯಲ್ಲಿ ತೊಡಗಿದ್ದ ಹಿಟಾಚಿ ಯಂತ್ರವನ್ನು ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1994ರ ಪ್ರಕಾರ ನಿಯಮಾನುಸಾರ ರೂ.50 ಸಾವಿರ ದಂಡ ವಿಧಿಸಿ ಕ್ರಮ ಕೈಗೊಳ್ಳಲಾಗಿದೆ.

ಅಕ್ರಮ ಗಣಿಗಾರಿಕೆಗೆ ಬಳಸಿದ ಹಿಟಾಚಿ ಯಂತ್ರದ ವಿರುದ್ಧ ಶಹಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಅಕ್ರಮ ಮರಳು ಸಾಗಾಣಿಕೆಯಲ್ಲಿ ತೊಡಗಿದ್ದ ವಾಹನವನ್ನು ಪೊಲೀಸ್ ಇಲಾಖೆ ವಶಕ್ಕೆ ಪಡೆದು ಸೈದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಜಿಲ್ಲೆಯಲ್ಲಿ ಅಕ್ರಮ ಮರಳು, ಮುರಂ ಹಾಗೂ ಇತರೆ ಉಪಖನಿಜಗಳ ಗಣಿಗಾರಿಕೆ ಮತ್ತು ಸಾಗಾಣಿಕೆ ತಡೆಯುವಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸದಸ್ಯರು ನಿರ್ಲಕ್ಷ್ಯ ವಹಿಸಿದರೆ, ಅವರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಖಡಕ್ ಸೂಚನೆ ನೀಡಿದ್ದಾರೆ ಎಂದು ಜಿಲ್ಲಾ ಗಣಿತ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಬುರಗಿ ಜವಳಿ ಪಾರ್ಕ್: ಮೊದಲ ಹಂತದ ನೀಲನಕ್ಷೆ ಸಿದ್ಧ ಶೀಘ್ರ ಕಾಮಗಾರಿಗಳ ಆರಂಭ: ಗೃಹ ಸಚಿವ ಪ್ರಿಯಾಂಕ್ ಖರ್ಗೆ



**ಕಲಬುರಗಿ,ಜೂ.12**–ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ–ಮಿತ್ರ ಜವಳಿ ಪಾರ್ಕ್' ಯೋಜನೆಯನ್ನು ಅತ್ಯಂತ ವ್ಯವಸ್ಥಿತವಾಗಿ ಹಾಗೂ ವೇಗವಾಗಿ ಅನುಷ್ಠಾನಗೊಳಿಸಲು ಮೊದಲ ಹಂತದ ಮೂಲಸೌಕರ್ಯ ನೀಲನಕ್ಷೆ ಮತ್ತು ಆಡಳಿತಾತ್ಮಕ ಮಾರ್ಗಸೂಚಿಯನ್ನು ಸಿದ್ಧಪಡಿಸಿದೆ ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಲಬುರಗಿ ಬಳಿ ಮೊದಲ ಹಂತದಲ್ಲಿ 1,000 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ಜವಳಿ ಪಾರ್ಕ್ ಕಾಮಗಾರಿಗಳ ಕುರಿತು ಚರ್ಚಿಸಲು ಸಚಿವರು ಇಂದು ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.


ಮೊದಲ ಹಂತದಲ್ಲಿ 1,000 ಎಕರೆ ಪ್ರದೇಶದಲ್ಲಿ ಪಾರ್ಕ್ ನಿರ್ಮಾಣ ಕಾಮಗಾರಿಗಳು ಆರಂಭವಾಗಲಿದ್ದು, ಹೂಡಿಕೆ ಮಾಡುವ ಉದ್ಯಮಗಳಿಗೆ ತಕ್ಷಣವೇ ಉತ್ಪಾದನೆ ಆರಂಭಿಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಜಾಗತಿಕ ಮಟ್ಟದ ಮೂಲಸೌಕರ್ಯಗಳನ್ನು ಒಳಗೊಂಡ 'ಪ್ಲಗ್ ಅಂಡ್ ಪ್ಲೇ' ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಮೊದಲ ಹಂತದಲ್ಲಿ ಕೋರ್ ಮೂಲಸೌಕರ್ಯಗಳ ಕಾಮಗಾರಿಗಳು ಆರಂಭವಾಗಲಿದ್ದು, ಸಿವಿಲ್ ಮತ್ತು ಭೂ ಅಭಿವೃದ್ಧಿ, ಆಂತರಿಕ ರಸ್ತೆಗಳ ನಿರ್ಮಾಣ ಮತ್ತು ಮಳೆನೀರನ್ನು ಸುಲಭವಾಗಿ ಹೊರಹಾಕಲು ಸುಸಜ್ಜಿತ ಆರ್‌ಸಿಸಿ (ಖಅಅ) ಡ್ರೈನೇಜ್ ವ್ಯವಸ್ಥೆ ಕಲ್ಪಿಸಲಾಗುವುದು. ಇಡೀ ಪಾರ್ಕನಲ್ಲಿ ಭೂಗತ (ಗಉ) ಹೈ–ಟೆನ್ಷನ್/ಲೋ–ಟೆನ್ಷನ್ (ಊಖ/ಐಖ) ವಿದ್ಯುತ್ ವಿತರಣಾ ಮಾರ್ಗಗಳು ಮತ್ತು ಪರಿಸರ ಸ್ನೇಹಿ ಸೋಲಾರ್ ಬೀದಿ ದೀಪಗಳ ಅಳವಡಿಸುವ ಪ್ರಕ್ರಿಯೆಯೂ ನಡೆಯಲಿದೆ ಎಂದು ಸಚಿವರು ವಿವರಿಸಿದರು.

5 ಲಕ್ಷ ಲೀಟರ್ ಸಾಮರ್ಥ್ಯದ ನೆಲಮಟ್ಟದ ಜಲಸಂಗ್ರಹಾಗಾರ (ಉಐಖಖ) ಮೂಲಕ ಶುದ್ಧ ನೀರು ಸರಬರಾಜು ಜಾಲ ಮತ್ತು ಸಂಸ್ಕರಿಸಿದ ನೀರಿಗಾಗಿ 10 ಲಕ್ಷ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗಾರ (ಇಐಖಖ) ನಿರ್ಮಾಣ. ಪರಿಸರ ಸಂರಕ್ಷಣೆಗಾಗಿ ಶೂನ್ಯ ದ್ರವ ವಿಸರ್ಜನೆ (ಚಿಐಆ) ತಂತ್ರಜ್ಞಾನ ಹೊಂದಿರುವ ಅತ್ಯಾಧುನಿಕ 2.5 ಒಐಆ ಸಾಮರ್ಥ್ಯದ ಸಾಮಾನ್ಯ ಒಳಚರಂಡಿ ತ್ಯಾಜ್ಯ ಸಂಸ್ಕರಣಾ ಘಟಕ (ಅಇಖಿಕ) ಮತ್ತು ಅದಕ್ಕೆ ಪೂರಕವಾದ ಪೈಪ್‌ಲೈನ್ ಜಾಲದ ಸ್ಥಾಪನೆ ಕಾರ್ಯ ಆರಂಭಗೊಳ್ಳಲಿದೆ ಎಂದ ಸಚಿವ ಖರ್ಗೆ ಕಾಮಗಾರಿಗಳಲ್ಲಿ ಗುಣಮಟ್ಟ ಕಾಪಾಡಿಕೊಳ್ಳಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ವಾಣಿಜ್ಯ ಹಾಗೂ ಕೈಗಾರಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಸೆಲ್ವಕುಮಾರ್ ಎಸ್, ಜವಳಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ ಹಾಗೂ ವಿಸಿ ಮೂಲಕ ಕಲಬುರಗಿ ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮ್ ಷರೀಫ್ ಹಾಗೂ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಪ್ರಕೃತಿ ವಿಕೋಪದ ಸಂಕಷ್ಟಕ್ಕೆ ರೈತರ ಬೆನ್ನಿಗೆ ನಿಂತ ಸರ್ಕಾರ: ಪರಿಹಾರ ಧನ ಸದ್ಬಳಕೆಗೆ ಶಾಸಕ ಕಂದಕೂರ ಕರೆ



ಯಲ್ಲಾಲಿಂಗ ಗೂಡೂರು, ಶಿವಯೋಗಿ, ಮರೆಪ್ಪ ಚಡಬಾ, ನರಸಿಂಹರಡ್ಡಿ ಚಿಂತಗುಂಟಾ, ಶಿವಶರಣಪ್ಪ, ಭೀಮರಾಯ ಇದ್ಲಿ ಯರಗೋಳ, ನಾಗರಡ್ಡಿ, ಹರ್ಷವರ್ಧನರಡ್ಡಿ, ಶಿವಶರಣಪ್ಪ ಪರಡಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

**ಯಾದಗಿರಿ:ಜೂ.12:** ಪ್ರಕೃತಿ ವಿಕೋಪದಿಂದ ಸಂಕಷ್ಟಕ್ಕೊಳಗಾದ ರೈತರ ನೆರವಿಗೆ ಸರ್ಕಾರ ಸದಾ ಬದ್ಧವಾಗಿದ್ದು, ನೀಡಲಾಗುತ್ತಿರುವ ಪರಿಹಾರ ಧನವನ್ನು ಸಮರ್ಪಕವಾಗಿ ಬಳಸಿಕೊಂಡು ಕುಟುಂಬದ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಳ್ಳಬೇಕು ಎಂದು ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅವರು ಕರೆ ನೀಡಿದರು.

ನಗರದ ಶಾಸಕರ ಕಚೇರಿಯಲ್ಲಿ ಪ್ರಕೃತಿ ವಿಕೋಪದಡಿ ಎತ್ತು, ಎಮ್ಮೆ, ಆಕಳು ಸೇರಿದಂತೆ ಜಾನುವಾರುಗಳನ್ನು ಕಳೆದುಕೊಂಡ ವಿವಿಧ ಗ್ರಾಮಗಳ ರೈತರಿಗೆ ಪರಿಹಾರ ಮೊತ್ತದ ಚೆಕ್ ವಿತರಿಸಿ ಮಾತನಾಡಿದ ಅವರು, ಮಳೆ ಕೊರತೆ ಹಾಗೂ ಬೆಳೆ ನಷ್ಟದಿಂದ ರೈತ ಸಮುದಾಯ ಈಗಾಗಲೇ ಅನೇಕ ಸವಾಲುಗಳನ್ನು ಎದುರಿಸುತ್ತಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ನೀಡುವ ಪರಿಹಾರ ಹಣವು ರೈತರ ಬದುಕಿಗೆ ಆಸರೆಯಾಗಬೇಕು ಎಂದರು.

ಪರಿಹಾರ ಧನವನ್ನು ಅನಗತ್ಯವಾಗಿ ಖರ್ಚು ಮಾಡದೆ ಮಕ್ಕಳ ಶಿಕ್ಷಣ, ಕುಟುಂಬದ ಅಗತ್ಯತೆಗಳು ಹಾಗೂ ಆರ್ಥಿಕ ಸಂಕಷ್ಟ ನಿವಾರಣೆಗೆ ಬಳಸಿಕೊಳ್ಳಬೇಕು. ರೈತರ ಸಮಸ್ಯೆಗಳಿಗೆ ಸ್ಪಂದಿಸಲು ಯಾವಾಗಲೂ ತಮ್ಮ ಬೆಂಬಲವಿದ್ದು, ಯಾವುದೇ ಸಂದರ್ಭದಲ್ಲಿ ಎದೆಗುಂದದೆ ಮುನ್ನಡೆಯುವಂತೆ ಶಾಸಕರು ರೈತರಿಗೆ ಆತ್ಮಸ್ಥೈರ್ಯ ತುಂಬಿದರು.

ಪ್ರಕೃತಿ ವಿಕೋಪದಿಂದ ಜಾನುವಾರುಗಳನ್ನು ಕಳೆದುಕೊಂಡ ಬಡ ಹಾಗೂ ಮಧ್ಯಮ ವರ್ಗದ ರೈತರಿಗೆ ಸರ್ಕಾರ ಪರಿಹಾರ ನೀಡುವ ಮೂಲಕ ಅವರ ಜೀವನಕ್ಕೆ ಭದ್ರತೆಯ ನೆರವು ಕಲ್ಪಿಸುತ್ತಿದೆ. ಈ ನೆರವು ರೈತರ ಪುನಶ್ಚೇತನಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ, ಈಶ್ವರಸಿಂಗ್ ನಾಯಕ್, ವಿರುಪಾಕ್ಷಪ್ಪ ಸಾಹುಕಾರ, ಶರಣರಡ್ಡಿ, ಹಂಪಯ್ಯ, ಸೋಮಯ್ಯ, ಭಾಸ್ಕರ್, ಭಾಗಣ್ಣಗೌಡ ಅಲ್ಲಿಪೂರ,

ಯರಗೋಳ ಗ್ರಾಮದ ದಿ. ಸೋಮರಾಯ ರಾಮಲಿಂಗಪ್ಪ ಅವರ ಕುಟುಂಬಕ್ಕೆ ?5 ಲಕ್ಷ, ಅಲ್ಲಿಪೂರ ಗ್ರಾಮದ ದಿ. ಸುನೀಲ್ ಆನಂದ ರಾಮಣ್ಣೋರ್ ಅವರ ಕುಟುಂಬಕ್ಕೆ 5 ಲಕ್ಷ, ಗೊಂದೆಡಗಿ ಗ್ರಾಮದ ರೈತ ಸಿದ್ದಪ್ಪ ಶಂಕ್ರಪ್ಪ ಹೂಗಾರ ಅವರಿಗೆ ಮೂರು ಆಕಳು ಮೃತಪಟ್ಟ ಹಿನ್ನೆಲೆಯಲ್ಲಿ 75 ಸಾವಿರ, ಗೂಡೂರು ಗ್ರಾಮದ ರೈತ ಶೇಖಪ್ಪ ರಾಮಣ್ಣ ಅವರಿಗೆ ಒಂದು ಎತ್ತು ಮೃತಪಟ್ಟ ಹಿನ್ನೆಲೆಯಲ್ಲಿ 50 ಸಾವಿರ ಹಾಗೂ ಹತ್ತಿಕುಣಿ ಗ್ರಾಮದ ರೈತ ಮಲ್ಲಪ್ಪ ಸಲೇರಿ ಅವರಿಗೆ ಒಂದು ಆಡು ಮೃತಪಟ್ಟ ಹಿನ್ನೆಲೆಯಲ್ಲಿ 20 ಸಾವಿರ ಪರಿಹಾರ ಧನದ ಚೆಕ್‌ಗಳನ್ನು ಶಾಸಕ ಶರಣಗೌಡ ಕಂದಕೂರ ವಿತರಿಸಿದರು.

# ನಾಗರಿಕಸ್ನೇಹಿ ಆಡಳಿತಕ್ಕೆ ಆದ್ಯತೆ ನೀಡಿ



**ಧಾರವಾಡ, ಜೂ.12:** ಸಾರ್ವಜನಿಕರಿಗೆ ವಿವಿಧ ಇಲಾಖೆಗಳಲ್ಲಿರುವ ಯೋಜನೆಯ ಬಗ್ಗೆ ಮಾಹಿತಿ ಒದಗಿಸಬೇಕು. ಆ ಮೂಲಕ ನಾಗರಿಕಸ್ನೇಹಿ ಆಡಳಿತಕ್ಕೆ ಅಧಿಕಾರಿಗಳು ಆದ್ಯತೆ ನೀಡಬೇಕೆಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ ವಿ. ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2026 ನೇ ಸಾಲಿನ ಮುಂಗಾರು ಪರಿಸ್ಥಿತಿಯನ್ನು ಎದುರಿಸಲು ಧಾರವಾಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಯ ಕ್ರಮಗಳ ಕುರಿತು ಸಭೆ ಜರುಗಿಸಿ, ಮಾತನಾಡಿದರು.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ರೀತಿ ಕೊರತೆ ಆಗದಂತೆ ಅಧಿಕಾರಿಗಳು ಕ್ರಮಕೈಗೊಳ್ಳಲು ತಿಳಿಸಿದರು. ಎಲ್ಲ ರೈತರಿಗೆ ಕಡ್ಡಾಯವಾಗಿ ಫ್ರೂಟ್ಸ್ ಐಡಿ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳುವಂತೆ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಹಾಗೂ ಯಾವುದೇ ರೈತರು ಫ್ರೂಟ್ಸ್ ಐಡಿ ನೋಂದಣಿ ಪ್ರಕ್ರಿಯೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಅಲ್ಲದೇ ರೈತರ ಪರಿಹಾರ ವಿತರಣೆಯಲ್ಲಿ ವಿಳಂಬವಾಗದಂತೆ ಕ್ರಮವಹಿಸಬೇಕು. ಫ್ರೂಟ್ಸ್ ಐಡಿ ನೋಂದಣಿ ಕುರಿತು ರೈತರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳು ಕಂಡುಬಂದಲ್ಲಿ ಪರಿಹರಿಸಲು ಸೂಕ್ತ ಕ್ರಮಕೈಗೊಳ್ಳಬೇಕು. ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಹೊಲಗಳಿಗೆ ರಸ್ತೆ ನಿರ್ಮಾಣ ಮಾಡಬೇಕು. ಗ್ರಾಮೀಣ ಭಾಗದ ರಸ್ತೆ, ಸೇತುವೆ ಗುಣಮಟ್ಟವಾಗಿರುವ ಬಗ್ಗೆ ಗಮನಹರಿಸಿ. ಹಳೆಯ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಿ ಎಂದು ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ 56,593 ಇ–ಪೌತಿ ಖಾತೆಗಳಿವೆ. ಅದರಲ್ಲಿ 12,519 ಬಾಕಿ ಇ–ಪೌತಿ ಖಾತೆಗಳಿವೆ. ಅವುಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗಿದೆ. ಈ ಕುರಿತು ಹೆಚ್ಚಿನ ಗಮನಹರಿಸಬೇಕು. ಮರಣ ಹೊಂದಿದವರ ಕುರಿತು ಮಾಹಿತಿ ಪಡೆದುಕೊಂಡು, ಖಾತೆಗಳ ಬದಲಾವಣೆಗೆ ಮುಂದಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಜಿಲ್ಲೆಯಲ್ಲಿರುವ ಕೆರೆಗಳ ಸ್ವಚ್ಛತೆಗೆ ಮುಂದಾಗಬೇಕು. ಉದ್ಯಾನವನದ ಅಭಿವೃದ್ಧಿಗೆ ಒತ್ತು ನೀಡಬೇಕಿದೆ. ಆರೋಗ್ಯ, ಕೃಷಿ, ತೋಟಗಾರಿಕೆ, ನಗರಾಭಿವೃದ್ಧಿ ಸೇರಿದಂತೆ ವಿವಿಧ ಇಲಾಖೆಗಳಲ್ಲಿರುವ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕು. ನಿರುದ್ಯೋಗ ಸಮಸ್ಯೆಗೆ ಉದ್ಯೋಗ ಅವಕಾಶಗಳನ್ನು ಸೃಷ್ಠಿ ಮಾಡಿಕೊಳ್ಳುವ ಮೂಲಕ ಸಮಸ್ಯೆ ಪರಿಹಾರಕ್ಕೆ ಕ್ರಮವಹಿಸಬೇಕು. ಕಸ ವಿಲೇವಾರಿ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಪ್ರೊಬೇಶನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ. ರುದ್ರೇಶ ಘಾಳಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಕೆ.ಸಿ.ಭದ್ರಣ್ಣವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ತಿಪಟೂರಿನ ಅಕ್ಷಯ ಕಲ್ಪ ಕ್ಯಾಂಪಸ್ ತರಬೇತಿಗೆ ವಿಜಯಪುರ ರೈತರು



**ವಿಜಯಪುರ, ಜೂ. 12:** ಜಿಲ್ಲೆಯ ಬಬಲೇಶ್ವರ ಹಾಗೂ ತಿಕೋಟಾ ತಾಲೂಕಿನ ಆಯ್ದ 20 ಜನ ರೈತರ ತಂಡವು ತುಮಕೂರು ಜಿಲ್ಲೆಯ ತಿಪಟೂರಿನಲ್ಲಿರುವ ಅಕ್ಷಯ ಕಲ್ಪ ಕ್ಯಾಂಪಸ್‌ಗೆ ತರಬೇತಿಗೆ ತೆರಳಿದೆ.

ನಿನ್ನೆ ಬುಧವಾರ ಸಂಜೆ ತಿಪಟೂರು ಅಕ್ಷಯಕಲ್ಪ ಕ್ಯಾಂಪಸ್ ಗೆ ತೆರಳುತ್ತಿರುವ ರೈತರಿಗೆ ಶುಭಕೋರಿದ ಬಿ.ಎಲ್.ಡಿ.ಇ ಡೀಮ್ಡ್ ವಿವಿ ಸಮಕುಲಾಧಿಪತಿ ಡಾ.ವೈ.ಎಂ.ಜಯರಾಜ ಅವರು, ವಿಜಯಪುರ ಜಿಲ್ಲೆಯಲ್ಲಿ ಸುಸ್ಥಿರ ಹೈನುಗಾರಿಕೆ ಮತ್ತು ತೋಟಗಾರಿಕೆಯನ್ನು ಉತ್ತೇಜಿಸಲು ಬಿ.ಎಲ್.ಡಿ.ಇ ಸಂಸ್ಥೆ, ಕೃಷಿಕಲ್ಪ ಫೌಂಡೇಶನ್ ಹಾಗೂ ಅಕ್ಷಯಕಲ್ಪ ಫೌಂಡೇಶನ್‌ಗಳ ಜಂಟಿ ಆಶ್ರಯದಲ್ಲಿ ಸಚಿವ ಎಂ.ಬಿ.ಪಾಟೀಲರ ಮಾರ್ಗದರ್ಶನದಲ್ಲಿ ಈ 'ಕ್ಷೀರ ಪೈಲಟ್' ಯೋಜನೆಗೆ ಚಾಲನೆ ನೀಡಲಾಗಿತ್ತು. ಇದರನ್ವಯ ಬಬಲೇಶ್ವರ ತಾಲೂಕಿನ ನಿಡೋಣಿ, ಕುಮಠೆ ಹಾಗೂ ನಾಗರಾಳ ಮತ್ತು ತಿಕೋಟಾ ತಾಲೂಕಿನ ಜಾಲಗೇರಿ, ಡೋಕಳೆವಾಡಿ ಗ್ರಾಮಗಳ ಉತ್ಸಾಹಿ ರೈತರು ಈ ತರಬೇತಿಗಾಗಿ ತೆರಳಿದ್ದಾರೆ. ವೈಜ್ಞಾನಿಕ ಮತ್ತು ಸಾವಯವ ಹೈನುಗಾರಿಕೆಯಲ್ಲಿ ದೇಶದಲ್ಲೇ ಮಾದರಿ ಎನಿಸಿಕೊಂಡಿರುವ ಅಕ್ಷಯ ಕಲ್ಪ ಸಂಸ್ಥೆಯ ಆವರಣದಲ್ಲಿ ರೈತರು ಸುಧಾರಿತ ತಂತ್ರಜ್ಞಾನಗಳ ನೇರ ಪ್ರಾತ್ಯಕ್ಷಿಕೆ ಹಾಗೂ ತರಬೇತಿಯನ್ನು ಪಡೆಯಲಿದ್ದಾರೆ ಎಂದರು.

ಬಿ.ಎಲ್.ಡಿ.ಇ ಡೀಮ್ಡ್ ವಿವಿ ರಜಿಸ್ಟ್ರಾರ್ ಡಾ. ಆರ್.ವಿ.ಕುಲಕರ್ಣಿ ಮಾತನಾಡಿ, ರೈತರು ತರಬೇತಿಯಲ್ಲಿ ವೈಜ್ಞಾನಿಕ ಕೊಟ್ಟಿಗೆ ನಿರ್ವಹಣೆಯಲ್ಲಿ ಹಸುಗಳ ಆರೋಗ್ಯ, ಸ್ವಚ್ಛತೆ ಮತ್ತು ಆಧುನಿಕ ತಂತ್ರಜ್ಞಾನದ ಮೂಲಕ ಹೈನುಗಾರಿಕೆಯನ್ನು ಲಾಭದಾಯಕವಾಗಿಸುವುದು ಹೇಗೆ ಎಂಬುದನ್ನು ಮತ್ತು ಸಾವಯವ ಹಾಲು ಉತ್ಪಾದನೆಯಲ್ಲಿ ರಾಸಾಯನಿಕ ಮುಕ್ತ ಹಾಗೂ ಗುಣಮಟ್ಟದ ಹಾಲಿನ ಉತ್ಪಾದನೆಗೆ ಪೂರಕವಾದ ತರಬೇತಿ ಪಡೆದು, ತಿಪಟೂರು ಭಾಗದ ರೈತರು ಅಕ್ಷಯ ಕಲ್ಪ ಮಾದರಿಯನ್ನು ಅಳವಡಿಸಿಕೊಂಡು ಆರ್ಥಿಕವಾಗಿ ಸಬಲರಾದಂತೆ, ವಿಜಯಪುರ ಜಿಲ್ಲೆಯಲ್ಲೂ ಶ್ವೇತ ಕ್ರಾಂತಿ ಸೃಷ್ಟಿಸುವುದು ಹೇಗೆ ಎಂಬುದನ್ನು ಮಾಹಿತಿ ಪಡೆಯಲಿದ್ದಾರೆ ಎಂದರು.

ಪ್ರಸ್ತುತ ತರಬೇತಿಗೆ ತೆರಳಿರುವ 20 ರೈತರು ಅಲ್ಲಿನ ತಂತ್ರಜ್ಞಾನ, ಶೆಡ್ ನಿರ್ಮಾಣ, ಹಸುಗಳ ಆಹಾರ ಕ್ರಮ ಮೇವು ನಿರ್ವಹಣೆ, ಕರು, ಕೋಳಿ ಸಾಕಾಣಿಕೆ ಮತ್ತು ಸಾವಯುವ ಪದ್ಧತಿಯಲ್ಲಿ ವಿವಿಧ ತರಕಾರಿ ಬೆಳೆ ಬೆಳೆಯುವ ಕುರಿತು ಅಧ್ಯಯನ ಮಾಡಿ ಬರಲಿದ್ದಾರೆ. ಈ ತರಬೇತಿಯು ಜಿಲ್ಲೆಯ ಹೈನುಗಾರಿಕಾ ಕ್ಷೇತ್ರಕ್ಕೆ ಹೊಸ ದಿಕ್ಸೂಚಿ ನೀಡಲಿದ್ದು, ಮುಂಬರುವ ದಿನಗಳಲ್ಲಿ ಯುವಕರು ಸ್ವಾವಲಂಬಿ ಉದ್ಯೋಗ ಕೈಗೊಳ್ಳಲು ಪ್ರೇರಣೆಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಸಹಾಯಕರಜಿಸ್ಟ್ರಾರ್ ಸತೀಶ ಪಾಟೀಲ, ಕೃಷಿಕಲ್ಪ ಫೌಂಡೇಶನ್ ನ ಸಂತೋಷ ಬಿರಾದಾರ ಉಪಸ್ಥಿತರಿದ್ದರು.

# ಜೀವನದಲ್ಲಿ ಯಶಸ್ವಿಯಾಗಲು ವಿದ್ಯಾರ್ಥಿಗಳು ತಮ್ಮಲ್ಲಿರುವ ಉದ್ಯಮಶೀಲತಾ ಕೌಶಲ್ಯ ಜಾಗೃತಗೊಳಿಸಬೇಕು:ಶಿಕರ್ ಮುಘಾ

**ಕಲಬುರಗಿ:ಜೂ.12:** ವಿಶ್ವವಿದ್ಯಾಲಯಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರಬರುತ್ತಿರುವ ಯುವ ಪ್ರತಿಭೆಗಳು ತಮ್ಮೊಳಗೆ ಅಡಗಿರುವ ಉದ್ಯಮಶೀಲತಾ ಕೌಶಲ್ಯಗಳನ್ನು ಜಾಗೃತಗೊಳಿಸಿಕೊಂಡು ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ತಮ್ಮ ಮೊದಲ ನೇಮಕಾತಿಯಲ್ಲೇ ಕಲಬುರಗಿ ಸಹಾಯಕ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಯುವ ಐಎಎಸ್ ಅಧಿಕಾರಿ ಶಿಕರ್ ಮುಘಾ ಹೇಳಿದರು. ಯುವ ವಿದ್ಯಾರ್ಥಿಗಳು ಸಮಾಜದ ಉತ್ಪಾದಕ ಪಾಲುದಾರರಾಗುವುದರ ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನಿಗದಿಪಡಿಸಿರುವ ಅಭಿವೃದ್ಧಿ ಗುರಿಗಳನ್ನು ಸಾಧಿಸುವಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು.

ಗುರುವಾರ ಶರಣಬಸವ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ದೊಡ್ಡಪ್ಪ ಅಪ್ಪಾ ಸಭಾ ಮಂಟಪದಲ್ಲಿ ಇಸಿಇ ವಿಭಾಗದ ತರಬೇತಿ ಮತ್ತು ಉದ್ಯೋಗ ನೇಮಕಾತಿ ಘಟಕವು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಹಯೋಗದಲ್ಲಿ ಆಯೋಜಿಸಿದ್ದ ಪ್ಲೇಸ್‌ಮೆಂಟ್ ಡ್ರೈವ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಮ್ಮ ವೈಯಕ್ತಿಕ ಅನುಭವವನ್ನು ಹಂಚಿಕೊಂಡರು.

ಇಂಜಿನಿಯರಿಂಗ್ ಶಿಕ್ಷಣ ಪೂರ್ಣಗೊಳಿಸಿದ ನಂತರ ಇಂಟರ್‌ಶಿಪ್ ಅವಧಿಯಲ್ಲಿ ಅಪಾರ ಜ್ಞಾನವನ್ನು ಸಂಪಾದಿಸಿದ್ದೇನೆ. ಆ ಅನುಭವವೇ ನನ್ನನ್ನು ಯಾವುದೇ ಕಂಪನಿಯಲ್ಲಿ ಉದ್ಯೋಗಿಯಾಗುವುದಕ್ಕಿಂತ ನಾಗರಿಕ ಸೇವೆಗಳ ಪರೀಕ್ಷೆಗೆ ಸಿದ್ಧಗೊಳ್ಳುವಂತೆ ಪ್ರೇರೇಪಿಸಿತು ಎಂದು ಹೇಳಿದರು.

ತಮ್ಮ ಕೆಲವು ಸ್ನೇಹಿತರು ಯಶಸ್ವಿ ಉದ್ಯಮಿಗಳಾಗಿ ಬೆಳೆದು, ಸಾವಿರಾರು ಕೌಶಲ್ಯಯುತ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಿದ್ದಾರೆ ಎಂದು ತಿಳಿಸಿದ ಅವರು, ವಿದ್ಯಾರ್ಥಿಗಳು ತಮ್ಮೊಳಗಿನ ಉದ್ಯಮಿಯಾಗುವ ಆಸೆಯನ್ನು ಬೆಳೆಸಿಕೊಂಡು ದೇಶದ ಅಭಿವೃದ್ಧಿ ಹಾಗೂ ಆರ್ಥಿಕ ಗುರಿಗಳನ್ನು ಸಾಧಿಸುವಲ್ಲಿ ಪಾಲುದಾರರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶವನ್ನು ರಾಜ್ಯದ ಇತರ ಭಾಗಗಳಿಗೆ ಸಮನಾಗಿ ಅಭಿವೃದ್ಧಿಪಡಿಸುವ ಅಗತ್ಯವಿದ್ದು, ಈ ಭಾಗದ ವಿದ್ಯಾವಂತ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕಾಗಿದೆ. ಈ ಉದ್ದೇಶಕ್ಕಾಗಿ ಸರಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ ಎಂದು ಶಿಕರ್ ಮುಘಾ ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಲಬುರಗಿ ಜಿಲ್ಲೆಯ ಹೀರೋ ಮೋಟಾರ್ಸ್



ಸಂಸ್ಥೆಯ ಪ್ರಧಾನ ವಿತರಕ ಕೃಷ್ಣಾಜಿ ಕುಲಕರ್ಣಿ, ತಮ್ಮ ಯಶೋಗಾಥೆಯನ್ನು ವಿವರಿಸಿದರು. ಇಂಜಿನಿಯರಿಂಗ್ ಪದವಿ ಹಾಗೂ ನಿರ್ವಹಣಾ ಸ್ನಾತಕೋತ್ತರ ಪದವಿ ಪಡೆದ ನಂತರ ಉತ್ತಮ ಉದ್ಯೋಗ ಪಡೆಯಲು ಮಾಡಿದ ಪ್ರಯತ್ನಗಳು ವಿಫಲವಾದ ಹಿನ್ನೆಲೆಯಲ್ಲಿ, ಕೇವಲ 10,000 ಆರಂಭಿಕ ಬಂಡವಾಳದೊಂದಿಗೆ ಆಗಿನ 'ಅಟ್ಲಾಸ್ ಮೊಪೆಡ್ಸ್' ಫ್ರಾಂಚೈಸಿ ಪಡೆದು ಸ್ವಂತ ಉದ್ಯಮ ಆರಂಭಿಸಿದೆ. ಅದೇ ನನ್ನ ಉದ್ಯಮಶೀಲತಾ ಪಯಣದ ಆರಂಭವಾಗಿದ್ದು, ಇಂದು ನನ್ನ ಸಂಸ್ಥೆಯಲ್ಲಿ ಸುಮಾರು 500ಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡಿದ್ದೇನೆ ಎಂದು ಹೇಳಿದರು. ಯುವಕರಲ್ಲಿ ಉದ್ಯಮಶೀಲತೆಯ ಮನೋಭಾವದ ಕೊರತೆ ಇರುವುದರ ಬಗ್ಗೆ ವಿಷಾದ ವ್ಯಕ್ತಪಡಿಸಿದ ಅವರು, ಯುವಕರು ತಮ್ಮ ಉದ್ಯಮಶೀಲ ಕೌಶಲ್ಯಗಳನ್ನು ಪರೀಕ್ಷಿಸುವುದರ ಜೊತೆಗೆ ಕೆಲಸದ ಸ್ಥಳದಲ್ಲಿ ಜವಾಬ್ದಾರಿಗಳನ್ನು ಹೊತ್ತುಕೊಳ್ಳುವ ಮನೋಭಾವವನ್ನೂ ಬೆಳೆಸಿಕೊಳ್ಳಬೇಕು. ತಮ್ಮ ಸಂಸ್ಥೆಯಲ್ಲಿ ಹಲವಾರು ಕಾರ್ಯನಿರ್ವಾಹಕ ಹುದ್ದೆಗಳು ಖಾಲಿ ಇದ್ದು, ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧರಾಗಿರುವ ಯುವಕರಿಗೆ ಅವಕಾಶಗಳು ಮುಕ್ತವಾಗಿವೆ ಎಂದು ತಿಳಿಸಿದರು.

ರೆನಾಲ್ಟ್ ಹಾಗೂ ಐಷರ್ ಹೆವಿ ವೆಹಿಕಲ್ಸ್ ಸಂಸ್ಥೆಗಳ ಪ್ರಧಾನ ವಿತರಕ ದೊಡ್ಡಪ್ಪ ನಿಷ್ಠಿ ಮಾತನಾಡಿ, ಕೃಷ್ಣಾಜಿ ಕುಲಕರ್ಣಿ ಹಾಗೂ ಶಿಕರ್ ಮುಘಾ ಅವರ ಅಭಿಪ್ರಾಯಗಳನ್ನು ಬೆಂಬಲಿಸಿದರು. ಕಠಿಣ ಪರಿಶ್ರಮ ಮತ್ತು ಉದ್ಯಮಶೀಲತಾ ಕೌಶಲ್ಯಗಳು ಮಾತ್ರ ಯುವಕರ ವೃತ್ತಿಜೀವನಕ್ಕೆ ಬಲವಾದ ಅಡಿಪಾಯವನ್ನು ಒದಗಿಸಬಲ್ಲವು ಎಂದು ಅವರು ಹೇಳಿದರು.ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಮಾತನಾಡಿ, ಶರಣಬಸವ ವಿಶ್ವವಿದ್ಯಾಲಯ ಆಯೋಜಿಸಿರುವ ಈ ಪ್ಲೇಸ್‌ಮೆಂಟ್ ಡ್ರೈವ್ ವಿದ್ಯಾರ್ಥಿಗಳಿಗೆ ಹೊಸ ಉದ್ಯೋಗಾವಕಾಶಗಳ ದಾರಿಯನ್ನು ತೆರೆಯಲಿದೆ. ಯಶಸ್ವಿ ಉದ್ಯಮಿಗಳಾಗಲು ವಿದ್ಯಾರ್ಥಿಗಳು ಮೊದಲು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ವಹಿಸಿದ್ದರು. ಕುಲಸಚಿವರಾದ ಡಾ. ಲಕ್ಷ್ಮಿ ಪಾಟೀಲ್ ಮಾಕಾ, ಡೀನ್ ಡಾ. ಶಿವಕುಮಾರ ಜವಳಿಗಿ, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಐಟಿ-ಬಿಟಿ ಇಲಾಖೆ) ಕಲಬುರಗಿಯ ಕ್ಲಸ್ಟರ್ ಮುಖ್ಯಸ್ಥ ಸುಜಯ್ ಮುದ್ಗಲ್, ವಿವಿಯ ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ ಹಾಗೂ ಸುಭಾ ಮಹತಾ ಸೇರಿದಂತೆ ಇತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ಲೇಸ್‌ಮೆಂಟ್ ಡ್ರೈವ್‌ನಲ್ಲಿ ಸಾಫ್ಟ್‌ವೇರ್, ಹಾರ್ಡ್‌ವೇರ್, ಆಟೋಮೊಬೈಲ್ ಹಾಗೂ ಇತರೆ ಕ್ಷೇತ್ರಗಳ ಅನೇಕ ಕಂಪನಿಗಳು ಮತ್ತು ಪ್ರತಿನಿಧಿಗಳು ಭಾಗವಹಿಸಿದ್ದರು.

# ಖೇತ್ ಬಚಾವೋ ಅಭಿಯಾನದಡಿ ಆಂದೋಲನ ಕಾರ್ಯಕ್ರಮ



**ಗದಗ, ಜೂ12:** ಖೇತ್ ಬಚಾವೋ ಅಭಿಯಾನದಡಿ ಕೃಷಿ ಇಲಾಖೆ ಗದಗ ಹಾಗೂ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ತಾಲೂಕಿನ ಬೂದಿಶ್ವರ ಹೊಸಳ್ಳಿ ಹಾಗೂ ಶ್ಯಾಗೋಟಿ ಗ್ರಾಮಗಳಲ್ಲಿ ಸಮತೋಲಿತ ರಸಗೊಬ್ಬರ ಬಳಕೆ ಹಾಗೂ ಬೀಜೋಪಚಾರದ ಕುರಿತು ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕೃಷಿ ಕ್ಷೇತ್ರದಲ್ಲಿ ಸುಸ್ಥಿರ ಉತ್ಪಾದನೆ, ಮಣ್ಣಿನ ಆರೋಗ್ಯ ಸಂರಕ್ಷಣೆ ಹಾಗೂ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಕೃಷಿ ಇಲಾಖೆ ಹಾಗೂ ಕೃಷಿ ವಿಜ್ಞಾನ ಕೇಂದ್ರ (ವಿಗಿವಿ) ಹುಲಕೋಟಿ ಸಹಭಾಗಿತ್ವದಲ್ಲಿ ಖೇತ್ ಬಚಾವೋ ಅಭಿಯಾನ ಎಂಬ ಮಹತ್ವದ ಜಾಗೃತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಅಭಿಯಾನದ ಮುಖ್ಯ ಉದ್ದೇಶ ಜಮೀನಿನಲ್ಲಿ ಮಣ್ಣಿನ ಫಲವತ್ತತೆ ಕಾಪಾಡುವುದು, ಅತಿಯಾದ ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕ ಬಳಕೆಯನ್ನು ಕಡಿಮೆ ಮಾಡುವುದು ಹಾಗೂ ಸಾವಯವ ಕೃಷಿ ಪದ್ಧತಿಗಳನ್ನು ಉತ್ತೇಜಿಸುವುದಾಗಿದೆ.

ಸದರಿ ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ, ಉಪ ಕೃಷಿ ನಿರ್ದೇಶಕರು-1 ಗದಗ ಶ್ರೀಮತಿ ಸ್ಫೂರ್ತಿ ಜಿ. ಎಸ್ , ಹಾಗೂ ಎನ್. ಎಚ್ ಭಂಡಿ, ಪ್ರವೀಣ ಕರಿಕಟ್ಟಿ, ವಿಜ್ಞಾನಿಗಳು, ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ, ಶ್ರೀಮತಿ ರಾಜರಾಜೇಶ್ವರಿ ಚಿನಿವಾರ ಹಾಗೂ ಬಸವರಾಜೇಶ್ವರಿ ಸಜ್ಜನರ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳು ಹಾಗು ವಿಜಯಕುಮಾರ ಸುಂಕದ ಹಾಗೂ ಇನ್ನಿತರ ಪ್ರಗತಿಪರ ರೈತರು ಭಾಗವಹಿಸಿದ್ದರು.

ವಿಜ್ಞಾನಿಗಳು ಮಣ್ಣು ಪರೀಕ್ಷೆಯ ಮಹತ್ವ, ಸಮತೋಲನ ಗೊಬ್ಬರ ಬಳಕೆ, ಜೈವಿಕ ಕೃಷಿ ವಿಧಾನಗಳು, ನೀರಿನ ಸಂರಕ್ಷಣೆ ಹಾಗೂ ಸಮಗ್ರ ಕೀಟ ನಿರ್ವಹಣೆ ಕುರಿತು ಉಪನ್ಯಾಸ ನೀಡಿದರು. ರೈತರಿಗೆ ಪ್ರಾಯೋಗಿಕವಾಗಿ ಬೀಜೋಪಚಾರ ಮಾಡುವ ಕುರಿತು ಮಾಹಿತಿ ನೀಡಲಾಯಿತು.ಕೃಷಿ ಇಲಾಖೆ ಅಧಿಕಾರಿಗಳು ಸರ್ಕಾರದ ವಿವಿಧ ಯೋಜನೆಗಳು, ಸಬ್ಸಿಡಿ ಸೌಲಭ್ಯಗಳು ಹಾಗೂ ಕೃಷಿ ಯಂತ್ರೋಪಕರಣಗಳ ಬಳಕೆಯ ಬಗ್ಗೆ ಮಾಹಿತಿ ನೀಡಿದರು. ರೈತರಿಗೆ ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವಂತೆ ಪ್ರೇರೇಪಿಸಲಾಯಿತು.

ಈ ಕಾರ್ಯಕ್ರಮವು ರೈತರಲ್ಲಿ ಉತ್ತಮ ಪ್ರತಿಕ್ರಿಯೆಯನ್ನು ಪಡೆದುಕೊಂಡಿದ್ದು, ಖೇತ್ ಬಚಾವೋ ಅಭಿಯಾನ ವು ಸಾವಯವ ಕೃಷಿ ಹಾಗೂ ಕೃಷಿ ಉತ್ಪಾದಕತೆ ಹೆಚ್ಚಿಸುವ ನಿಟ್ಟಿನಲ್ಲಿ ಸಹಾಯಕಾರಿಯಾಗಲಿದೆ ಎಂದು ಪ್ರಗತಿ ಪರ ರೈತರು ವ್ಯಕ್ತ ಪಡಿಸಿದರು.ಕಾರ್ಯಕ್ರಮದಲ್ಲಿ ಬೂದಿಶ್ವರ ಹೊಸಳ್ಳಿ, ಕುರ್ತಕೋಟಿ, ಶ್ಯಾಗೋಟಿ, ದುಂದೂರ ಹಾಗೂ ಚಿಕ್ಕಹಂದಿಗೋಳ ಗ್ರಾಮದ ಹಲವಾರು ರೈತರು, ರೈತ ಮಹಿಳೆಯರು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

# ಮೂಲ ಸೌಕರ್ಯಗಳ ಕೊರತೆಯಿಂದ ನರಳುತ್ತಿರುವ ಕಾಳಗಿ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ

**ಕಾಳಗಿ:ಜೂ.12:** ಶಿಕ್ಷಣದ ಗುಣಮಟ್ಟ ಸುಧಾರಣೆ ಹಾಗೂ ವಿದ್ಯಾರ್ಥಿಗಳ ಫಲಿತಾಂಶ ಹೆಚ್ಚಿಸುವ ಬಗ್ಗೆ ಸರ್ಕಾರ ನಿರಂತರವಾಗಿ ಒತ್ತು ನೀಡುತ್ತಿದ್ದರೂ, ಮೂಲ ಸೌಕರ್ಯಗಳ ಕೊರತೆಯಿಂದ ಕಾಳಗಿ ಪಟ್ಟಣದ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ. ಪಟ್ಟಣ ಪಂಚಾಯಿತಿ ಹಾಗೂ ಶಿಕ್ಷಣ ಇಲಾಖೆಯ ನಡುವಿನ ಸಮನ್ವಯದ ಕೊರತೆಯಿಂದ ಶಾಲೆ ಹಲವು ಸಮಸ್ಯೆಗಳ ಸುಳಿಯಲ್ಲಿ ಸಿಲುಕಿದೆ.


ಕುಡಿಯುವ ನೀರಿಗಾಗಿ ವಿದ್ಯಾರ್ಥಿಗಳ ಪರದಾಟ

ಶಾಲೆಯಲ್ಲಿ ನೂರಾರು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಯಿಲ್ಲ. ಶಾಲೆಯ ಪಕ್ಕದಲ್ಲೇ ಕುಡಿಯುವ ನೀರಿನ ಪೈಪ್‌ಲೈನ್ ಹಾದು ಹೋಗಿದ್ದರೂ ಸಂಪರ್ಕ ಕಲ್ಪಿಸುವಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಪರಿಣಾಮವಾಗಿ ಮಧ್ಯಾಹ್ನದ ಬಿಸಿಯೂಟ ಸೇವಿಸಿದ ನಂತರ ವಿದ್ಯಾರ್ಥಿಗಳು ದೂರದಲ್ಲಿರುವ ಬೋರ್‌ವೆಲ್‌ಗೆ ತೆರಳಿ ದಾಹ ನೀಗಿಸಿಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಶೌಚಾಲಯುಗಳಿದ್ದರೂ ಪ್ರಯೋಜನವಿಲ್ಲ: ಶಾಲೆಯಲ್ಲಿ ಶೌಚಾಲಯ ನಿರ್ಮಿಸಲಾಗಿದ್ದರೂ ನೀರಿನ ಕೊರತೆಯಿಂದ ಅವು ಬಳಕೆಗೆ ಯೋಗ್ಯವಾಗಿಲ್ಲ. ವಿಶೇಷವಾಗಿ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚಿರುವ ಶಾಲೆಯಲ್ಲಿ ಈ ಸಮಸ್ಯೆ ಗಂಭೀರ ಸ್ವರೂಪ ಪಡೆದುಕೊಂಡಿದೆ. ವಿದ್ಯಾರ್ಥಿಗಳು ಅನಿವಾರ್ಯವಾಗಿ ಬಯಲು ಪ್ರದೇಶವನ್ನೇ ಆಶ್ರಯಿಸುವ ಸ್ಥಿತಿ ಎದುರಾಗಿದೆ.

ಜಾಲಿಗಿಡಗಳ ನಡುವೆ ಶಾಲೆ: ಶಾಲೆಯ ಆವರಣದಲ್ಲಿ ಜಾಲಿಗಿಡಗಳು ಹಾಗೂ ಹಸಿರು ಬಳ್ಳಿಗಳು ವ್ಯಾಪಕವಾಗಿ ಬೆಳೆದಿದ್ದು, ವಿಷಕಾರಿ ಹಾವು ಸೇರಿದಂತೆ ಅಪಾಯಕಾರಿ ಪ್ರಾಣಿಗಳ ಓಡಾಟ ಕಂಡು ಬರುತ್ತಿದೆ. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಕೂಡಲೇ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

ಕಿಡಿಗೇಡಿಗಳ ಹಾವಳಿ: ಶಾಲೆಯ ಕೊಠಡಿಗಳು ಹಾಗೂ ಆಸ್ತಿಪಾಸ್ತಿಗಳಿಗೆ ಕಿಡಿಗೇಡಿಗಳಿಂದ ಹಾನಿಯಾಗುತ್ತಿದೆ. ಸಿಸಿ ಟಿವಿ ಕ್ಯಾಮೆರಾಗಳು, ಶೌಚಾಲಯಗಳ ಬಾಗಿಲುಗಳು ಹಾಗೂ ನೀರಿನ ಟ್ಯಾಂಕರ್‌ಗಳನ್ನು ಧ್ವಂಸಗೊಳಿಸಿರುವ ಘಟನೆಗಳು ನಡೆದಿವೆ.



ಶಾಲಾ ಮೈದಾನದಲ್ಲಿ ನೆಡಲಾಗಿದ್ದ ಸಸಿಗಳನ್ನೂ ಹಾಳು ಮಾಡಲಾಗಿದೆ. ಶಾಲೆಯ ಆಸ್ತಿಯನ್ನು ರಕ್ಷಿಸಲು ಪೊಲೀಸ್ ಇಲಾಖೆಯಿಂದ ಭದ್ರತೆ ಒದಗಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.ಸರಕಾರಿ ಕಿರಿಯ ಶಾಲೆಯ ಸಮಸ್ಯೆಗಳ ಕುರಿತು ಯಾರೂ ನನ್ನ ಗಮನಕ್ಕೆ ತಂದಿಲ್ಲ. ನಾಳೆಯೇ ಸ್ಥಳಕ್ಕೆ ಭೇಟಿ ನೀಡಿ ಕುಡಿಯುವ ನೀರು ಸೇರಿದಂತೆ ಅಗತ್ಯ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಪಂಕಜಾ ಎ,

ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಕಾಳಗಿ: ಶಾಲೆಗಳ ಕೊಠಡಿಗಳನ್ನು ಕಿಡಿಗೇಡಿಗಳು ಹಾಳು ಮಾಡುತ್ತಿದ್ದಾರೆ. ಸಿಸಿ ಟಿವಿ ಕ್ಯಾಮೆರಾಗಳು, ಶೌಚಾಲಯಗಳ ಬಾಗಿಲುಗಳು, ನೀರಿನ ಟ್ಯಾಂಕರ್‌ಗಳನ್ನು ಒಡೆದು ಹಾಕಲಾಗಿದೆ. ಶಾಲೆಗೆ ಪೊಲೀಸ್ ಭದ್ರತೆ ಒದಗಿಸಬೇಕು ಮಕ್ಕಳ ಸಂಖ್ಯೆಯ ಅನುಗುಣವಾಗಿ ಶಿಕ್ಷಕರನ್ನು ನಿಯೋಜಿಸ ಬೇಕು.

ಅಬ್ದುಲ್ ರೌಫ್,

ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷರು ಕಾಳಗಿ

# ಹೆಲ್ಮೆಟ್ ಇಲ್ಲದವರಿಗೆ ಸ್ಥಳದಲ್ಲಿಯೇ ಖರೀದಿಸಲು ಸೂಚಿಸಿದ ಟ್ರಾಫಿಕ್ ಪೊಲೀಸ್

**ಕಲಬುರಗಿ,ಜೂ 12 :** ನಗರದ ಜಿಲ್ಲಾಧಿಕಾರಿ ಕಚೇರಿ ಎದುರಿನ ರಸ್ತೆಯಲ್ಲಿ ಹೆಲ್ಮೆಟ್ ಇಲ್ಲದೇ ಸಂಚರಿಸುತ್ತಿದ್ದ ನೂರಕ್ಕೂ ಅಧಿಕ ದ್ವಿಚಕ್ರ ವಾಹನ ಸವಾರರನ್ನು ಇಂದು ತಡೆದು ನಿಲ್ಲಿಸಿದ ಸಂಚಾರಿ ಪೊಲೀಸರು ಅವರಿಗೆ ಯಾವುದೇ ದಂಡ ವಿಧಿಸಲಿಲ್ಲ. ಆದರೆ,ಹೆಲ್ಮೆಟ್ ಇಲ್ಲದವರು ಸ್ಥಳದಲ್ಲಿಯೇ ಖರೀದಿಸಿ, ಮನೆಯಲ್ಲಿ ಹೆಲ್ಮೆಟ್ ಇಟ್ಟು ಬಂದವರು ಮನೆಗೆ ಹೋಗಿ ತೆಗೆದುಕೊಂಡು ಬನ್ನಿ ಎಂದು ಸೂಚಿಸಿದರು.ಅದರಂತೆ ಹೆಲ್ಮೆಟ್ ಖರೀದಿಸದೇ ಇದ್ದ ಹಲವರು ಸ್ಥಳದಲ್ಲಿಯೇ ಖರೀದಿಸಿದರು. ಮನೆಯಲ್ಲಿಟ್ಟವರು ಮನೆಗೆ ತೆರಳಿದರು. ಈ ವಿನೂತನ ಪ್ರಯೋಗ ಸಾರ್ವಜನಿಕರ ಪ್ರಶಂಸೆಗೆ ಪಾತ್ರವಾಗಿದೆ.



ಈ ಸಂದರ್ಭದಲ್ಲಿ ಸಂಚಾರಿ ಎಸಿಪಿ ಡಿ.ಟಿ ಪ್ರಭು , ಪಿಎಸ್‌ಐಗಳಾದ ಭಾರತಿಬಾಯಿ ಧನ್ನಿ ಮತ್ತು ಅರ್ಜುನಸಿಂಗ್ ಠಾಕೂರ ಹಾಗೂ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಸಚಿವ ಸ್ಥಾನಕ್ಕೆ ಆಗ್ರಹ

**ಹುಬ್ಬಳ್ಳಿ,ಜೂ12:** ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ಹುಬ್ಬಳ್ಳಿ ತಾಲೂಕ ರೈತ ಸಂಘದಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ತಹಶಿಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ ಪ್ರತಿಭಟನಾಕಾರರು, ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರು ಸತತ ಮೂರು ಬಾರಿ ಶಾಸಕರಾಗಿ ಪೂರ್ವ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ.

ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಿದರೆ ಇನ್ನಷ್ಟು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಅಬ್ಬಯ್ಯ ಅವರು ಮಾಡಲಿದ್ದಾರೆ.ಈ ನಿಟ್ಟಿನಲ್ಲಿ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.



ಪ್ರತಿಭಟನೆಯಲ್ಲಿ ಹುಬ್ಬಳ್ಳಿ ತಾಲೂಕು ರೈತ ಸಂಘದ ಅಧ್ಯಕ್ಷರಾದ ಸಿದ್ದಪ್ಪ ಮೀಸೆ, ಉಪಾಧ್ಯಕ್ಷ ಫಕ್ಕೀರಗೌಡ ಪಾಟೀಲ್, ರೈತ ಮುಖಂಡರಾದ ಅಡಿವೆಪ್ಪ ನಂದಿಹಳ್ಳಿ, ಗುರಸಿದ್ದಪ್ಪ ಕಟಗಿ, ಚನ್ನಬಸಪ್ಪ ಅಸುಂಡಿ, ಮೋಹನ್ ಅಸುಂಡಿ, ವೀರಭದ್ರಪ್ಪ ಮೇಟಿ ಗಂಗಾಧರ ಅಸುಂಡಿ ಸೇರಿದಂತೆ ಇತರರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE